Volume : 9 ಸಂಪುಟ : 9 | Issue : 215 ಸಂಚಿಕೆ : 215 | November : 17, 2026 : Tuesday ನವಂಬರ್ : 17, 2026 : ಮಂಗಳವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ || VIKRAMA VAHINI

PRGI NO: KARKAN/2018/78481





ಕನ್ನಡದ ಸ್ಟಾರ್ ನಟ ಯಶ್ ನಟಿಸಿರುವ "ರಾಮಾಯಣ" ಚಿತ್ರವು ದಿನದಿಂದ ದಿನಕ್ಕೆ ತನ್ನ ಗಳಿಕೆ ಹೆಚ್ಚಿಸಿಕೊಂಡು ಹಾಕೆ ದಾಖಲೆಗಳನ್ನು ಮುರಿಯುವ ನಿಟ್ಟಿನಲ್ಲಿ ಭರದಿಂದ ಸಾಗಿದೆ. ಈ ಚಿತ್ರದ ಗಳಿಗೆ ಇದೀಗ 1400 ಕೋಟಿ ರೂ. ಸಮೀಪಿಸಿದ್ದು, ಚಿತ್ರ ನಿರ್ಮಾಪಕರಿಗೆ ಸಂತಸ ಮೂಡಿಸಿದೆ.

'ಜನಪ್ರಿಯತೆಗಾಗಿ ಸತ್ಯನಿಷ್ಠೆ, ಜವಾಬ್ದಾರಿಯನ್ನು ಬಲಿಕೊಡಬಾರದು' । ಪುಟ 3


'ಮನೆಗೊಂದು ಕನ್ನಡ ಪತ್ರಿಕೆ' ಅಭಿಯಾನಕ್ಕೆ ಚಾಲನೆ । ಪುಟ 4

■ ಸುದ್ದಿ ಚುಟುಕು

ಹತ್ತು ಆನೆಗಳ ಸೂಕ್ತ ಆವಾಸಕ್ಕೆ ಅರಣ್ಯ ಇಲಾಖೆ ಅಸ್ತು

● ವಿಕ್ರಮ ವಾಹಿನಿ । ಬೆಂಗಳೂರು

ಹಾಸನ ವಿಭಾಗದಲ್ಲಿ ಮಾನವ–ಆನೆ ಸಂಘರ್ಷಕ್ಕೆ ಕಾರಣವಾಗಿರುವ 10 ಗಂಡು ಕಾಡಾನೆಗಳನ್ನು ನಿರ್ದಿಷ್ಟವಾಗಿ ಗುರುತಿಸಿ, ಸುರಕ್ಷತಾ ದೃಷ್ಟಿಯಿಂದ ಹಾಗೂ ಆನೆಗಳಿಂದ ಉಂಟಾಗಬಹುದಾದ ಮಾನವ ಗಾಯ, ಪ್ರಾಣಹಾನಿ ಹಾಗೂ ಇನ್ನಿತರೆ ದಾಳಿ ಮತ್ತು ಅನಾಹುತಗಳನ್ನು ತಪ್ಪಿಸಲು ಸೂಕ್ತ ಆವಾಸಕ್ಕೆ ವ್ಯವಸ್ಥೆ ಮಾಡಲು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರ ಸೂಚನೆ ಮೇರೆಗೆ ಅರಣ್ಯ ಇಲಾಖೆ ಸಮ್ಮತಿಸಿದೆ.



ಈ ಕುರಿತು ಕರ್ನಾಟಕ ಸರ್ಕಾರದ ಅರಣ್ಯ ಇಲಾಖೆ ಉನ್ನತಾಧಿಕಾರಿಗಳು ಅಧಿಸೂಚನೆ ಹೊರಡಿಸಿದ್ದು, ಆ 10 ಗಂಡು ಕಾಡಾನೆಗಳನ್ನು ಸೆರೆ ಹಿಡಿದು, ಅವುಗಳ ಆರೋಗ್ಯ ಸ್ಥಿತಿಗತಿಗಳಿಗೆ ಅನುಗುಣವಾಗಿ ಆನೆಗಳ ಆವಾಸಕ್ಕೆ ಸೂಕ್ತವಾಗಿರುವ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸಲು ವನ್ಯಜೀವಿ (ರಕ್ಷಣಾ) ಕಾಯ್ದೆ, 1972ರ ಸೆಕ್ಷನ್ 11(1)(ಅ) ರನ್ನೆಯ ಅನುಮತಿ ನೀಡಲಾಗಿದೆ. ಆನೆ ಸೆರೆ ಕಾರ್ಯಾಚರಣೆಗೆ ಉಲ್ಲೇಖ (3) ರ ಆದೇಶದಂತೆ ಪುನರ್ ರಚಿಸಲಾಗಿರುವ ಸಾಕಾನೆ ತಂಡ ಏ ಮತ್ತು ಸಿ ಕುಮ್ಕಿ ಆನೆಗಳನ್ನು ಬಳಸಿ ಕಾರ್ಯಾಚರಣೆ ಮುಂದುವರೆದಿದೆ ಎಂದು ಉನ್ನತಾಧಿಕಾರಿಗಳು ತಿಳಿಸಿದ್ದಾರೆ.

ಆನೆ ಸೆರೆ ಕಾರ್ಯಾಚರಣೆಯನ್ನ ಮಾನವ–ಆನೆ ಸಂಘರ್ಷಕ್ಕೆ ಕಾರಣವಾಗಿರುವ ಕಾಡಾನೆಗಳನ್ನು ನಿರ್ದಿಷ್ಟವಾಗಿ ಗುರುತಿಸಿ ಆದ್ಯತೆಗೆ ಅನುಗುಣವಾಗಿ ಕೈಗೊಳ್ಳಲು ಸೂಚಿಸಿದೆ. ಸಂಬಂಧಪಟ್ಟ ಸಾಕಾನೆ ಶಿಬಿರದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ತುರ್ತಾಗಿ ಕುಮ್ಕಿ ಸಾಕಾನೆಗಳು ಹಾಗೂ ಆನೆ ಸಿಬ್ಬಂದಿಗಳನ್ನು ಕಾರ್ಯಾಚರಣೆಗೆ ನಿಯೋಜಿಸಲು ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ. ಸದರಿ ಕಾರ್ಯಾಚರಣೆಗಳನ್ನು ಕೈಗೊಳ್ಳುವ ಸಂದರ್ಭಗಳಲ್ಲಿ, ವನ್ಯಜೀವಿ (ರಕ್ಷಣಾ) ಕಾಯ್ದೆ, 1972ರ ಉಲ್ಲಂಘನೆಯಾಗದಂತೆ ಹಾಗೂ ಉಲ್ಲೇಖ (4) ರ ಪತ್ರದಲ್ಲಿ ನೀಡಿರುವ ನಿರ್ದೇಶನ ಹಾಗೂ ಪ್ರಮಾಣಿತ ಕಾರ್ಯ ವಿಧಾನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಹಾಗೂ ಮುಂಜಾಗೃತಾ ಕ್ರಮವಹಿಸಲು ತಿಳಿಸಲಾಗಿದೆ.

ಈ ಕಾರ್ಯಾಚರಣೆಯಲ್ಲಿ ಅರಣ್ಯ ಇಲಾಖೆಯ ಕ್ಷೇತ್ರ ಸಿಬ್ಬಂದಿ ಮತ್ತು ಸ್ಥಳೀಯ ಜನರಿಗೆ ಯಾವುದೇ ಅಪಾಯವಾಗದಂತೆ ಎಲ್ಲಾ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲು ಮತ್ತು ಕಾರ್ಯಾಚರಣೆಯ ವರದಿ ತಲುಪಿಸಬೇಕೆಂದು ಸಚಿವರ ಸೂಚನೆ ಮೇರೆಗೆ ಮೇಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಗೋವಾ ಸ್ಕ್ರೀನಿಂಗ್ ಸಮಿತಿಗೆ ಕೆ.ಜೆ.ಜಾರ್ಜ್ ಅಧ್ಯಕ್ಷರಾಗಿ ನೇಮಕ


● ವಿಕ್ರಮ ವಾಹಿನಿ । ಬೆಂಗಳೂರು

ಎಐಸಿಸಿಯ ಅಧ್ಯಕ್ಷರು ಮುಂಬರುವ ವಿಧಾನಸಭಾ ಚುನಾವಣೆಗಳಿಗಾಗಿ ಸ್ಕ್ರೀನಿಂಗ್ ಸಮಿತಿಗಳನ್ನು ರಚಿಸಿದ್ದು ಗೋವಾ ಸ್ಕ್ರೀನಿಂಗ್ ಸಮಿತಿಗೆ ಕರ್ನಾಟಕ ಸರ್ಕಾರದ ಇಂಧನ ಮತ್ತು ಪ್ರವಾಸೋದ್ಯಮ ಸಚಿವರಾದ ಕೆ.ಜೆ.ಜಾರ್ಜ್ ಅವರು ಅಧ್ಯಕ್ಷರಾಗಿ ನೇಮಕಗೊಂಡಿದ್ದಾರೆ.



ಈ ಕುರಿತು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರು ಪತ್ರಿಕಾ ಪ್ರಕಟಣೆ ನೀಡಿದ್ದು, ಅವರೊಂದಿಗೆ ಸತೇಜ್ ಡಿ. ಪಾಟೀಲ್ ಮತ್ತು ಶಾಫಿ ಪರಂಬಿಲ್ ಕರ್ತವ್ಯ ನಿರ್ವಹಿಸಲಿದ್ದಾರೆ.

ಉತ್ತರ ಪ್ರದೇಶ: ಅಜಯ್ ಮಕೇನ್ – ಅಧ್ಯಕ್ಷರು. ಅಸ್ಲಮ್ ಶೇಕ್ ಮತ್ತು ಬಿ. ವಿ. ಶ್ರೀನಿವಾಸ್. ಪಂಜಾಬ್: ಡಾ. ಸಿರಿವೆಲ್ಲ ಪ್ರಸಾದ್ – ಅಧ್ಯಕ್ಷರು, ಸಚಿನ್ ಸಾವಂತ್ ಮತ್ತು ನಿವೇದಿತ್ ಆಳ್ವ. ಉತ್ತರಾಖಂಡ್ ರಾಜ್ಯಕ್ಕೆ ಸ್ಮಿತ ದೀಪಾ ದಾಸ್ಮುನ್ಸಿ – ಅಧ್ಯಕ್ಷರು, ಅನಿಲ್ ಚೌಧರಿ ಮತ್ತು ಪಾಲ್ ಭಾಯ್ ಅಂಬಾಲಿಯಾ. ಮಣಿಪುರಕ್ಕೆ ಬಿ. ಎಂ. ಸಂದೀಪ್ – ಅಧ್ಯಕ್ಷರು, ಹಿಬಿ ಈಡನ್ ಮತ್ತು ರಾಜೇಶ್ ಠಾಕೂರ್ ಕರ್ತವ್ಯ ನಿರ್ವಹಿಸಲಿದ್ದಾರೆ.





ಸೋಮವಾರ ನವದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ ಕಾಂಗ್ರೆಸ್ ವರಿಷ್ಠೆ ಶ್ರೀಮತಿ ಸೋನಿಯಾ ಗಾಂಧಿ ಅವರು ಬರೆದಿರುವ ತಮ್ಮ ಜೀವನದ ಘಟನೆಗಳ ಆಧಾರಿತ "ಸೋನಿಯಾ ಗಾಂಧಿ – ಬಿಲಾಂಗಿಂಗ್ ಜರ್ನಿ ಆಫ್ ಲವ್" ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ವೇದಿಕೆ ಮೇಲೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕ ವಾದ್ರಾ ಮತ್ತಿತರರು ಇದ್ದರು.

ಪ್ರತಿ ದಿನ ಸರಾಸರಿ 31 ಮಂದಿ ಅಪಘಾತಗಳಿಗೆ ಬಲಿ!

ಐದು ವರ್ಷಗಳಲ್ಲಿ ತಗ್ಗಿದ ಸಾವಿನ ಸಂಖ್ಯೆ ಶೇ. 20 ರಷ್ಟು ಹೆಚ್ಚಾದ ಅವಘಡಗಳು

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ರಸ್ತೆ ಅಪಘಾತಗಳ ಸಂಖ್ಯೆ ಆತಂಕಕಾರಿ ಮಟ್ಟ ತಲುಪಿದ್ದು, ಪ್ರತಿ ವರ್ಷ 11 ಸಾವಿರಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಅಂದರೆ, ಪ್ರತಿದಿನ ಸರಾಸರಿ 31 ಮಂದಿ ರಸ್ತೆ ಅಪಘಾತಗಳಿಗೆ ಬಲಿಯಾಗುತ್ತಿದ್ದಾರೆ ಎಂದು ಸಂಚಾರ ಮತ್ತು ರಸ್ತೆ ಸುರಕ್ಷತಾ ವಿಭಾಗ ಬಿಡುಗಡೆ ಮಾಡಿರುವ ಅಂಕಿ ಅಂಶಗಳು ತಿಳಿಸಿವೆ.

ಬೆಂಗಳೂರು ನಗರವನ್ನು ಹೊರತುಪಡಿಸಿ ರಾಜ್ಯದ ಉಳಿದ ಭಾಗಗಳಲ್ಲಿ 2021ರಲ್ಲಿ 31,434 ರಸ್ತೆ ಅಪಘಾತಗಳು ಸಂಭವಿಸಿದ್ದವು. 2025ರ ವೇಳೆಗೆ ಈ ಸಂಖ್ಯೆ 37,682ಕ್ಕೆ ಏರಿಕೆಯಾಗಿದೆ. ಐದು ವರ್ಷಗಳಲ್ಲಿ ಅಪಘಾತಗಳ ಸಂಖ್ಯೆ 20%ರಷ್ಟು ಹೆಚ್ಚಾಗಿದೆ.

ಇದೇ ಅವಧಿಯಲ್ಲಿ ರಸ್ತೆ ಅಪಘಾತಗಳಿಂದ ಮೃತಪಟ್ಟವರ ಸಂಖ್ಯೆ 9,384ರಿಂದ 11,344ಕ್ಕೆ (21%) ಏರಿಕೆಯಾಗಿದೆ.



ಇನ್ನು, 2023ರಲ್ಲಿ ರಾಜ್ಯದಲ್ಲಿ 38,466 ಅಪಘಾತಗಳು ಸಂಭವಿಸಿದ್ದು, 11,406 ಮಂದಿ ಮೃತಪಟ್ಟಿದ್ದರು. 2024ರಲ್ಲಿ 38,293 ಅಪಘಾತಗಳಲ್ಲಿ 11,496 ಮಂದಿ ಸಾವನ್ನಪ್ಪಿದ್ದರು. ಇದಲ್ಲದೆ, 2024ರಲ್ಲಿಯೇ ಬೆಂಗಳೂರಿನಲ್ಲಿಯೇ 4,769 ಅಪಘಾತಗಳು ಮತ್ತು 906 ಸಾವುಗಳು ದಾಖಲಾಗಿದ್ದವು.

ಬೆಂಗಳೂರು ಹೊರತುಪಡಿಸಿ ರಾಜ್ಯದಲ್ಲಿ 2025ರಲ್ಲಿ ಸಾವಿನ ಸಂಖ್ಯೆ 11,344ಕ್ಕೆ ಇಳಿದಿದ್ದರೂ, ರಸ್ತೆ ಅಪಘಾತಗಳಲ್ಲಿ ಗಾಯಗೊಂಡವರ ಸಂಖ್ಯೆ ಹೆಚ್ಚಾಗಿದೆ. 2021ರಲ್ಲಿ 37,934 ಮಂದಿ ಗಾಯಗೊಂಡಿದ್ದರೆ, 2025ರಲ್ಲಿ ಈ ಸಂಖ್ಯೆ 49,305ಕ್ಕೆ ತಲುಪಿದೆ.

2026ರ ಜನವರಿಯಿಂದ ಸೆಪ್ಟೆಂಬರ್ ಅಂತ್ಯದವರೆಗಿನ 9 ತಿಂಗಳಲ್ಲಿಯೇ ರಾಜ್ಯದಲ್ಲಿ 28,809 ಅಪಘಾತಗಳು ಸಂಭವಿಸಿದ್ದು, 8,048 ಮಂದಿ ಮೃತಪಟ್ಟಿದ್ದಾರೆ. 37,289 ಮಂದಿ ಗಾಯಗೊಂಡಿದ್ದಾರೆ.

2025ರಲ್ಲಿ ಸಂಭವಿಸಿರುವ 37,682 ಒಟ್ಟು ರಸ್ತೆ ಅಪಘಾತಗಳಲ್ಲಿ 62.68%ರಷ್ಟು ಘಟನೆಗಳು ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಸಂಭವಿಸಿವೆ ಎಂದು ಈ ವರ್ಷದ ಫೆಬ್ರವರಿಯಲ್ಲಿ ಪ್ರಕಟವಾದ ಮತ್ತೊಂದು ವರದಿ ತಿಳಿಸಿದೆ. ಹೆದ್ದಾರಿಗಳಲ್ಲಿ ಅತಿವೇಗ, ನಿರ್ಲಕ್ಷ್ಯದ ಚಾಲನೆ, ಅಪೂರ್ಣ ರಸ್ತೆ ಕಾಮಗಾರಿಗಳು ಹಾಗೂ ಮೂಲಸೌಕರ್ಯಗಳಲ್ಲಿನ ದೋಷಗಳು ಅಪಘಾತಗಳಿಗೆ ಪ್ರಮುಖ ಕಾರಣಗಳಾಗಿವೆ ಎಂದು ವರದಿ ಹೇಳಿದೆ.

ಹೆದ್ದಾರಿಗಳಲ್ಲಿ ಸಂಭವಿಸುತ್ತಿರುವ ಅಪಘಾತಗಳ ಬಗ್ಗೆ ಪ್ರತಿಕ್ರಿಯಿಸಿರುವ ರಾಜ್ಯ ಪೊಲೀಸ್ ಮಹಾನಿರ್ದೇಶಕ ಎಂ.ಎ. ಸಲೀಂ, "ರಾಜ್ಯ ಹೆದ್ದಾರಿಗಳು ಪಟ್ಟಣಗಳು ಮತ್ತು ಹಳ್ಳಿಗಳ ಮೂಲಕ ಹಾದುಹೋಗುವುದರಿಂದ ಪಾದಚಾರಿಗಳು, ದ್ವಿಚಕ್ರ ವಾಹನಗಳು, ಟ್ರ್ಯಾಕ್ಟರ್‌ಗಳು ಹಾಗೂ ಬಸ್‌ಗಳ ಸಂಚಾರ ಹೆಚ್ಚಿರುತ್ತದೆ. ಅಪಾಯಕಾರಿ ತಿರುವುಗಳು, ಜಂಕ್ಷನ್‌ಗಳು ಮತ್ತು ರಸ್ತೆಬದಿಯ ಚಟುವಟಿಕೆಗಳೂ ಅಪಘಾತದ ಅಪಾಯ ಹೆಚ್ಚಿಸುತ್ತವೆ" ಎಂದು ತಿಳಿಸಿದ್ದಾರೆ.

▶2ನೇ ಪುಟಕ್ಕೆ...

ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸುದೀರ್ಘ ಪತ್ರ ಬರೆದ ಹೆಚ್.ಡಿ.ದೇವೇಗೌಡರು

ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರಕ್ಕೆ ನೀಡಲಾಗಿರುವ ಸಾಂವಿಧಾನಿಕ ಹಕ್ಕುಗಳನ್ನು ಮೊಟಕುಗೊಳಿಸಿ'



ಕಾವೇರಿ ಜಲ ವಿವಾದಕ್ಕೆ ಸಂಬಂಧಿಸಿದಂತೆ ಪದೇ ಪದೇ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದೆ. ಮಳೆ ಇಲ್ಲದಿದ್ದರೂ, ಕುಡಿಯುವ ನೀರಿಗೆ ತಾತ್ವರ ಇದ್ದರೂ ತಮಿಳುನಾಡಿಗೆ ನೀರು ಬಿಡಬೇಕು ಎಂಬ ತೀರ್ಪು ರಾಜ್ಯಕ್ಕೆ ಮಾರಕವಾಗಿ ಪರಿಣಮಿಸುತ್ತಿರುವ ಬೆನ್ನಲ್ಲೇ ಮಾಜಿ ಪ್ರಧಾನಿ ದೇವೇಗೌಡ ಅವರು ಪ್ರಧಾನಿಗೆ ಈ ಸಂಬಂಧ ಪತ್ರ ಬರೆದು ಸಿಡಬ್ಲ್ಯೂಎಂಎಗೆ ಇರುವ ಸಂವಿಧಾನಾತ್ಮಕ ಅಧಿಕಾರವನ್ನು ಮೊಟಕುಗೊಳಿಸಲು ಮನವಿ ಮಾಡಿದ್ದಾರೆ. ಈ ಪತ್ರಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಬೆಲೆ ಕೊಡುತ್ತಾರೋ ಇಲ್ಲವೋ ಎಂಬುದನ್ನು ಕಾದುನೋಡಬೇಕಿದೆ.



● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಉಂಟಾಗಿರುವ ತೀವ್ರ ಮಳೆ ಕೊರತೆಯಿಂದಾಗಿ ಕಾವೇರಿ ಜಲಾನಯನ ಪ್ರದೇಶದಲ್ಲಿ ತಲೆದೋರಿರುವ ಕುಡಿಯುವ ನೀರು ಮತ್ತು ಕೃಷಿ ಬಿಕ್ಕಟ್ಟಿನ ಕುರಿತು ಮಾಜಿ ಪ್ರಧಾನ ಮಂತ್ರಿ ಎಚ್.ಡಿ. ದೇವೇಗೌಡ ಅವರು ಪ್ರಧಾನಿ ನರೇಂದ್ರ ಮೋದಿಯವರಿಗೆ ಪತ್ರ ಬರೆದಿದ್ದಾರೆ.

ಕೇಂದ್ರ ಸರ್ಕಾರವು ಶೀಘ್ರವಾಗಿ ಮಧ್ಯಪ್ರವೇಶಿಸಿ ಈ ಗಂಭೀರ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕೆಂದು ಅವರು ಕೋರಿದ್ದಾರೆ.

ಪತ್ರದಲ್ಲಿ ಕಾವೇರಿ ಜಲ ನಿರ್ವಹಣೆಯಲ್ಲಿರುವ ಪ್ರಮುಖ ದೋಷಗಳು, ಪ್ರಾಧಿಕಾರಕ್ಕೆ ನೀಡಿರುವ ಸಂವಿಧಾನಬಾಹಿರ ಅಧಿಕಾರಗಳು ಹಾಗೂ ಮೇಕೆದಾಟು ಯೋಜನೆಯ ಅನುಷ್ಠಾನದ ತುರ್ತು ಅಗತ್ಯವನ್ನು ಎಳೆಎಳೆಯಾಗಿ ವಿವರಿಸಿರುವ ಮಾಜಿ ಪ್ರಧಾನಿಗಳು, ರಾಷ್ಟ್ರೀಯ ಜಲನೀತಿಯ ಅಡಿಯಲ್ಲಿ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಬೇಕೆಂಬುದನ್ನು ಪ್ರಧಾನಿಯವರ ಗಮನಕ್ಕೆ ತಂದಿದ್ದಾರೆ.

<u>ಕಾವೇರಿ ನದಿ ನೀರು ನಿರ್ವಹಣೆಯ ಸಮಸ್ಯೆಗಳು ಮತ್ತು ತಾರತಮ್ಯ:</u> 2026ರ ವರ್ಷದಲ್ಲಿ ರಾಜ್ಯವು ಭಾರಿ ಮಳೆ ಕೊರತೆಯನ್ನು ಎದುರಿಸುತ್ತಿದ್ದು, ಕೇವಲ ಶೇ.60ರಷ್ಟು ಮಾತ್ರ ಮಳೆಯಾಗಿದೆ. ಇದರಿಂದಾಗಿ ರಾಜ್ಯದ ಜಲಾಶಯಗಳು ತಮ್ಮ ಸಾಮರ್ಥ್ಯದ ಶೇ. 50–55ರಷ್ಟು ಮಾತ್ರ ತುಂಬಿವೆ. ಇಂತಹ ಭೀಕರ ಪರಿಸ್ಥಿತಿಯಲ್ಲಿಯೂ, ಮುಂಬರುವ ಬೇಸಿಗೆಯಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಕುಡಿಯುವ ನೀರಿನ ಅಗತ್ಯಕ್ಕಾಗಿ ಕಾಯ್ದಿರಿಸಬೇಕಾದ ಅಲ್ಪ ನೀರನ್ನೂ ತಮಿಳುನಾಡಿನ ಕೃಷಿ ಅಗತ್ಯಗಳಿಗಾಗಿ ಬಿಡುವಂತೆ ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ ಪದೇ ಪದೇ ನಿರ್ದೇಶನ ನೀಡುತ್ತಿರುವುದು ಆತಂಕಕಾರಿ ಎಂದು ಪತ್ರದಲ್ಲಿ ದೇವೇಗೌಡರು ಕಳವಳ ವ್ಯಕ್ತಪಡಿಸಿದ್ದಾರೆ.

1990ರಲ್ಲಿ ರಚನೆಯಾದ ನ್ಯಾಯಮಂಡಳಿ, ಇತಿಹಾಸದಲ್ಲೇ ಮೊದಲ ಬಾರಿಗೆ 12 ತಿಂಗಳ ಮಾಸಿಕ ಬಿಡುಗಡೆ ವೇಳಾಪಟ್ಟಿಯನ್ನು ನಿಗದಿಪಡಿಸುವ ಅಸಹಜ ಮಧ್ಯಂತರ ಆದೇಶವನ್ನು ನೀಡಿತು. 2007ರ ಅಂತಿಮ ತೀರ್ಪಿನಲ್ಲೂ ಕರ್ನಾಟಕಕ್ಕೆ ನ್ಯಾಯಸಮ್ಮತವಾಗಿ ಸಿಗಬೇಕಿದ್ದ ಪ್ರಮಾಣಕ್ಕಿಂತ ಕಡಿಮೆ ನೀರನ್ನು ಹಂಚಿಕೆ ಮಾಡುವ ಮೂಲಕ ಸ್ಪಷ್ಟ ತಾರತಮ್ಯ ಮಾಡಲಾಗಿದೆ ಎಂದು ದೇವೇಗೌಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<u>CWMAಗೆ ನೀಡಲಾದ ಸಂವಿಧಾನ ಬಾಹಿರ ಹೆಚ್ಚುವರಿ ಅಧಿಕಾರಗಳು:</u> ಜಲಸಂಪನ್ಮೂಲ ಸಚಿವಾಲಯವು 2018ರಲ್ಲಿ ಸಿದ್ಧಪಡಿಸಿದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಕರಡು ಯೋಜನೆಯು ರಾಜ್ಯಗಳ ಸಾಂವಿಧಾನಿಕ ಹಕ್ಕುಗಳ ಸ್ಪಷ್ಟ ಉಲ್ಲಂಘನೆಯಾಗಿದೆ. ಸಂವಿಧಾನದ ಏಳನೇ ಅನುಸೂಚಿಯ ರಾಜ್ಯಪಟ್ಟಿಯ ನಮೂದು 17ರ ಪ್ರಕಾರ 'ನೀರಾವರಿ' ಎಂಬುದು ಸಂಪೂರ್ಣವಾಗಿ ರಾಜ್ಯಗಳ ವ್ಯಾಪ್ತಿಗೆ ಬರುವ ವಿಷಯವಾಗಿದೆ. ಆದರೆ, ಕಾವೇರಿ ನೀರಿನ ಸಂಗ್ರಹ, ಹಂಚಿಕೆ, ಬೆಳೆ ಪದ್ಧತಿಯ ಬದಲಾವಣೆ ಮತ್ತು ಜಲಾಶಯಗಳ ಕಾರ್ಯಾಚರಣೆಯಂತಹ ಸೂಕ್ಷ್ಮ ವಿಚಾರಗಳಲ್ಲಿ ಪ್ರಾಧಿಕಾರಕ್ಕೆ ಹಸ್ತಕ್ಷೇಪ ಮಾಡಲು ವ್ಯಾಪಕ ಅಧಿಕಾರ ನೀಡಿರುವುದು ಸಂವಿಧಾನಬಾಹಿರ ಎಂದು ಮಾಜಿ ಪ್ರಧಾನಿಗಳು ಪ್ರಬಲವಾಗಿ ಪ್ರತಿಪಾದಿಸಿದ್ದಾರೆ.

"ಕರ್ನಾಟಕಕ್ಕೆ ಹಂಚಿಕೆಯಾದ ನೀರನ್ನು ತನ್ನ ಹಿತಾಸಕ್ತಿಗೆ ಅನುಗುಣವಾಗಿ ಬಳಸುವ ಸ್ವಾತಂತ್ರ್ಯವಿದೆ. ಅದಕ್ಕೆ ಹಂಚಿಕೆಯಾದ ನೀರಿನ ಪ್ರಮಾಣ ಕಡಿಮೆಯಾಗದ ಹೊರತು ಬೇರೆ ಯಾವುದೇ ರಾಜ್ಯವು ಈ ವಿಷಯದಲ್ಲಿ ಹಸ್ತಕ್ಷೇಪಿಸುವ ಹಕ್ಕಿಲ್ಲ" ಎಂಬ 2025ರ ನವೆಂಬರ್ 13ರ ಸುಪ್ರೀಂ ಕೋರ್ಟ್ ನೀಡಿರುವ ಆದೇಶವನ್ನು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಈ ಆದೇಶದ ಅನ್ವಯ, ಅಫಒಂಯ ಅಧಿಕಾರವನ್ನು ಕೇವಲ ಕರ್ನಾಟಕ–ತಮಿಳುನಾಡು ಗಡಿಯಲ್ಲಿರುವ ಬಿಳಿಗುಂಡ್ಲು ಅಳತೆ ಕೇಂದ್ರದಲ್ಲಿ ನೀರಿನ ಹರಿವಿನ ಮೇಲ್ವಿಚಾರಣೆಗೆ ಮಾತ್ರ ಸೀಮಿತಗೊಳಿಸಬೇಕು ಎಂದು ದೇವೇಗೌಡರು ಒತ್ತಾಯಿಸಿದ್ದಾರೆ.

<u>ನ್ಯಾಯಮಂಡಳಿಯ ತೀರ್ಪುಗಳ ಮರುಪರಿಶೀಲನೆಯ ಅಗತ್ಯ:</u> ಕಾವೇರಿ ನ್ಯಾಯಮಂಡಳಿಯು 50 ವರ್ಷಗಳಿಗಿಂತ ಹಳೆಯ ದತ್ತಾಂಶಗಳ ಆಧಾರದ ಮೇಲೆ ನೀರು ಹಂಚಿಕೆ ಮಾಡಿದೆ. ಪ್ರಸ್ತುತ ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯಿಂದಾಗಿ ಮುಂಗಾರು ಚಕ್ರ ಸಂಪೂರ್ಣವಾಗಿ ಅನಿಶ್ಚಿತವಾಗಿದೆ. ಹೀಗಾಗಿ, ಬದಲಾಗಿರುವ ಪ್ರಸ್ತುತ ಪರಿಸ್ಥಿತಿಗಳಿಗೆ ಅನುಗುಣವಾಗಿ ನ್ಯಾಯ ಮಂಡಳಿಯ ತೀರ್ಪು ಹಾಗೂ ಸುಪ್ರೀಂ ಕೋರ್ಟ್‌ನ 2018ರ ಆದೇಶಗಳನ್ನು ಸಮಗ್ರವಾಗಿ ಮರುಪರಿಶೀಲಿಸುವ ಕಾಲ ಬಂದಿದೆ ಎಂದು ಪತ್ರದಲ್ಲಿ ದೇವೇಗೌಡರು ಅಭಿಪ್ರಾಯಪಟ್ಟಿದ್ದಾರೆ.

ತಮಿಳುನಾಡು ಸರ್ಕಾರವು ಮೇಕೆದಾಟು ವಿಚಾರಕ್ಕೆ ಸಂಬಂಧಿಸಿದಂತೆ ಹೊಸ ನ್ಯಾಯಮಂಡಳಿ ರಚಿಸುವಂತೆ ಕೇಂದ್ರ ಸರ್ಕಾರಕ್ಕೆ ಇತ್ತೀಚೆಗೆ ದೂರು ಸಲ್ಲಿಸಿದೆ. ಪ್ರಸ್ತಾವಿತ ಹೊಸ ನ್ಯಾಯಮಂಡಳಿ ರಚನೆಯಾದಾಗ, ಹಳೆಯ ಕಾವೇರಿ ತೀರ್ಪಿನ ಮರು ಪರಿಶೀಲನೆಯ ಜವಾಬ್ದಾರಿಯನ್ನೂ ಅದೇ ನ್ಯಾಯಮಂಡಳಿಗೆ ವಹಿಸಬೇಕೆಂದು ಅವರು ಕೋರಿದ್ದಾರೆ.

<u>ಮೇಕೆದಾಟು ಯೋಜನೆ ಮತ್ತು ನದಿ ಜೋಡಣೆ:</u> ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ಮಹಾನಗರದ ಕುಡ

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ಪರಂಪರೆ ಉಳಿಸಿಕೊಂಡೇ 'ಗಂಗಾ' ನಿವಾಸಕ್ಕೆ ಮರು ವಿನ್ಯಾಸ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಅತಿಥಿಗೃಹವಾಗಿದ್ದ ಕುಮಾರ ಕೃಪವನ್ನು ಮುಖ್ಯಮಂತ್ರಿಗಳ ಅಧಿಕೃತ ನಿವಾಸವಾಗಿ ಪರಿವರ್ತಿಸಿ 'ಗಂಗಾ' ಎಂದು ಮರುನಾಮಕರಣ ಮಾಡಲಾಗಿದೆ. ಕಟ್ಟಡದ ಮೂಲ ಪರಂಪರೆಯನ್ನು ಉಳಿಸಿಕೊಂಡೇ ಶೇ.10ರಷ್ಟು ಮಾತ್ರ ಮರುವಿನ್ಯಾಸ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಸೋಮವಾರ ನೂತನ ಅಧಿಕೃತ ನಿವಾಸ 'ಗಂಗಾ'ದ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತಮ್ಮ ಹಿಂದಿನ ಸರ್ಕಾರಿ ನಿವಾಸ ಚಿಕ್ಕದಾಗಿತ್ತು. ಮತ್ತೊಂದೆಡೆ, ಕುಮಾರಕೃಪ ಅತಿಥಿಗೃಹ ಬಳಕೆಯಾಗದೆ ಉಳಿದಿತ್ತು. ಹೀಗಾಗಿ ಅದನ್ನು ಮುಖ್ಯಮಂತ್ರಿಗಳ ಅಧಿಕೃತ ನಿವಾಸವಾಗಿ ಪರಿವರ್ತಿಸುವ ನಿರ್ಧಾರ ಕೈಗೊಳ್ಳಲಾಯಿತು. ಸೋಮವಾರ ಮನೆಯಲ್ಲಿ ಖಾಸಗಿ ಪೂಜೆ ನೆರವೇರಿಸಿದ್ದು, ಗುರುವಾರ ರಾಜ್ಯದ 224 ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಸಂಸದರನ್ನು ಆಹ್ವಾನಿಸಲಾಗುವುದು. ಬಳಿಕ ಈ ನಿವಾಸದಲ್ಲಿ ಎಲ್ಲರನ್ನೂ ಭೇಟಿಯಾಗುವುದಾಗಿ ತಿಳಿಸಿದರು.

ಕಡಿಮೆ ವೆಚ್ಚದ ಗ್ರಾನೈಟ್, ಶೇ.90ರಷ್ಟು ಪೀಠೋಪಕರಣ ಖಾಸಗಿ

ನಿವಾಸದ ನವೀಕರಣಕ್ಕೆ ತಗಲಿರುವ ವೆಚ್ಚದ ಕುರಿತು ಪ್ರತಿಕ್ರಿಯಿಸಿದ ಶಿವಕುಮಾರ್, ಕೆಲವರು ಖರ್ಚಿನ ಬಗ್ಗೆ ಪ್ರಶ್ನೆ ಮಾಡಬಹುದು. ಆದರೆ ಭದ್ರತೆ ಮತ್ತು ರಸ್ತೆ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ವೆಚ್ಚವಾಗಿದೆ. ಉಳಿದಂತೆ ಶೇ.90ರಷ್ಟು ಪೀಠೋಪಕರಣಗಳು ತಮ್ಮ ಖಾಸಗಿ ಬಳಕೆಯವು. ಪ್ರತಿ ಚದರ ಅಡಿಗೆ ಸುಮಾರು 60ರಿಂದ 80 ರೂ. ಮೌಲ್ಯದ ಕಡಿಮೆ ವೆಚ್ಚದ ಗ್ರಾನೈಟ್ ಕಲ್ಲುಗಳನ್ನು ಬಳಸಲಾಗಿದೆ ಎಂದು ವಿವರಿಸಿದರು.

ವೆಚ್ಚದ ಬಗ್ಗೆ ಟೀಕೆಗಳು ವ್ಯಕ್ತವಾಗಬಹುದು



ಎಂಬ ಕಾರಣಕ್ಕೆ ತಮ್ಮ ಹಿಂದಿನ ಮನೆಯಲ್ಲಿದ್ದ ಹಾಗೂ ಕುಮಾರಕೃಪದಲ್ಲಿದ್ದ ಹಳೆಯ ಪೀಠೋಪಕರಣಗಳನ್ನೇ ಬಳಸಿಕೊಳ್ಳಲಾಗಿದೆ. ಈ ಕುರಿತು ಕೆಲವರು ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿಯನ್ನೂ ಸಲ್ಲಿಸಿದ್ದಾರೆ ಎಂದು ಹೇಳಿದರು.

ಪಾರಂಪರಿಕ ಕಟ್ಟಡದ ಸ್ವರೂಪ ಬದಲಿಸಲಾಗಿದೆ ಎಂಬ ವಿರೋಧ ಪಕ್ಷಗಳ ಟೀಕೆಗೆ ಪ್ರತಿಕ್ರಿಯಿಸಿದ ಅವರು, ವಿರೋಧ ಪಕ್ಷದವರು ಟೀಕೆ ಮಾಡುವುದು ಅವರ ಕರ್ತವ್ಯ. ಅವರನ್ನು ಕೂಡ ಕಾರ್ಯಕ್ರಮಕ್ಕೆ ಆಹ್ವಾನಿಸುತ್ತೇನೆ. ಬಂದು ನಿವಾಸವನ್ನು ಪರಿಶೀಲಿಸಲಿ ಎಂದು ಹೇಳಿದರು.

ಸಾರ್ವಜನಿಕರ ಭೇಟಿಗೆ ಪ್ರತ್ಯೇಕ ವ್ಯವಸ್ಥೆ

'ಗಂಗಾ' ನಿವಾಸದಲ್ಲಿ ಶಾಸಕರು ಮತ್ತು ಅಧಿಕಾರಿಗಳ ಭೇಟಿ ಹಾಗೂ ಚರ್ಚೆಗಳಿಗೆ ಅವಕಾಶ ಕಲ್ಪಿಸಲಾಗುವುದು.

ಸಾರ್ವಜನಿಕರ ಭೇಟಿಗಾಗಿ ಪಕ್ಕದ 'ಕೃಷ್ಣಾ' ನಿವಾಸದ ಬಳಿ ಪ್ರತ್ಯೇಕ ಸಭಾಂಗಣ ನಿರ್ಮಿಸಲಾಗುತ್ತಿದೆ. ಈ ಕಾಮಗಾರಿ ಪೂರ್ಣಗೊಳ್ಳಲು ಇನ್ನೂ ಒಂದರಿಂದ ಎರಡು ತಿಂಗಳು ಬೇಕಾಗಬಹುದು ಎಂದು ತಿಳಿಸಿದರು. ಯಾರೂ ಈ ಸ್ಥಾನದಲ್ಲಿ ಶಾಶ್ವತವಾಗಿ ಇರುವುದಿಲ್ಲ. ಆದರೆ ರಾಜ್ಯದ ಮುಖ್ಯಮಂತ್ರಿಯಾಗಿ ಕಾರ್ಯ ನಿರ್ವಹಿಸುವವರಿಗೆ ಅನುಕೂಲವಾಗಬೇಕು. ಬಳಕೆಯಾಗದೆ ಉಳಿದಿದ್ದ ಅತಿಥಿಗೃಹದ ಜಾಗವನ್ನು ವ್ಯರ್ಥ ಮಾಡಬಾರದು ಎಂಬ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಶಿವಕುಮಾರ್ ಸ್ಪಷ್ಟಪಡಿಸಿದರು.

ತಮ್ಮ ದೆಹಲಿ ಪ್ರವಾಸದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಸೋಮವಾರ ರಾತ್ರಿ ದೆಹಲಿಗೆ ತೆರಳಿ, ಅಲ್ಲಿನ ನಾಯಕರ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅದೇ ರಾತ್ರಿ ಬೆಂಗಳೂರಿಗೆ ಮರಳುವುದಾಗಿ ತಿಳಿಸಿದರು. ಇತರ ವಿಚಾರಗಳ ಕುರಿತು ಚರ್ಚಿಸಲು ಸಮಯಾವಕಾಶವಿಲ್ಲ ಎಂದರು.

ಖಾಸಗಿ ಕ್ಯಾಬ್‌ಗಳಿಗೆ ಮೀಟರ್ ಕಡ್ಡಾಯ

● ವಿಕ್ರಮ ವಾಹಿನಿ । ಮುಖಪುಟದಿಂದ

ರಾಜ್ಯ ಸರ್ಕಾರಿ ಸ್ವಾಮ್ಯದ 4 ಸಾರಿಗೆ ನಿಗಮಗಳ ನೌಕರರಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದೆ. ಬಾಕಿ ಇರುವ ವೇತನದ ಹಿಂಬಾಕಿ ಪೈಕಿ 280 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸೋಮವಾರ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರಿಗೆ ನಿಗಮಗಳ ನೌಕರರಿಗೆ ಒಟ್ಟು 1200 ಕೋಟಿ ರೂಪಾಯಿಗಳ ವೇತನ ಬಾಕಿ ಇತ್ತು. ಈ ಪೈಕಿ ನಮ್ಮ ಸರ್ಕಾರ ಮೊದಲ ಕಂತಿನಲ್ಲಿ 450 ಕೋಟಿ ರೂಪಾಯಿಗಳನ್ನು ಮತ್ತು ಎರಡನೇ ಕಂತಿನಲ್ಲಿ 170 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿತ್ತು. ಇದೀಗ ಮೂರನೇ ಕಂತಿನಲ್ಲಿ 280 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ತಿಳಿಸಿದರು.

ಬಾಕಿ ಉಳಿಯುವ ಮುನ್ನೂರು ಕೋಟಿ ರೂಪಾಯಿಗಳನ್ನು ಹಣದ ಲಭ್ಯತೆ ನೋಡಿಕೊಂಡು ಶೀಘ್ರದಲ್ಲೇ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಹೇಳಿದರು.

ಈ ಮೂಲಕ ರಾಜ್ಯದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಕಾಂಗ್ರೆಸ್ ಸರ್ಕಾರ ಸಾರಿಗೆ ಇಲಾಖೆಯ ನೌಕರರ ಹಿತ ಕಾಯುವ ನಿರ್ಧಾರವನ್ನು ತೆಗೆದುಕೊಂಡಿದೆ ಎಂದರು.

ಗ್ರೀನ್ ಎಸ್ ಎಂ ಟ್ಯಾಕ್ಸಿಗೆ ನಿರ್ಬಂಧ

ವಿಯಟ್ನಾಂ ಮೂಲದ ಗ್ರೀನ್ ಎಸ್ ಎಂ ಟ್ಯಾಕ್ಸಿಗೆ ಈಗಾಗಲೇ 100 ಟ್ಯಾಕ್ಸಿಗಳ ನೋಂದಣಿ ಮಾಡಲಾಗಿದೆ. ಆದರೆ, ಮುಂದಿನ ಆದೇಶದವರೆಗೆ ಹೊಸದಾಗಿ ಯಾವುದೇ ಗ್ರೀನ್ ಎಸ್ ಎಂ ಟ್ಯಾಕ್ಸಿಗಳನ್ನು ನೋಂದಣಿ ಮಾಡದಂತೆ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಅರ್ಧ ಹೆಲ್ಮೆಟ್‌ಗೆ ಬ್ರೇಕ್..!

ಕರ್ನಾಟಕದಲ್ಲಿ ದ್ವಿಚಕ್ರ ವಾಹನ ಸವಾರರು ಬಳಸುವ ಅರ್ಧ ಹೆಲ್ಮೆಟ್‌ಗಳನ್ನು ನಿಷೇಧಿಸಲು ರಾಜ್ಯ ಸರ್ಕಾರ ಮುಂದಾಗಿದೆ. ಅಸುರಕ್ಷಿತ ಅರ್ಧ ಹೆಲ್ಮೆಟ್‌ಗಳ ಬಳಕೆಯನ್ನು ಸಂಪೂರ್ಣವಾಗಿ ತಡೆಯುವುದರ ಜತೆಗೆ, ಅವುಗಳ ಉತ್ಪಾದನೆ ಮತ್ತು ತಯಾರಿಕಾ ಘಟಕಗಳ ವಿರುದ್ಧವೂ ಕ್ರಮ ಕೈಗೊಳ್ಳಲು ಸಿದ್ಧತೆ ನಡೆಸಿದೆ. ಈ ಸಂಬಂಧ ಅಧಿಕೃತ ಆದೇಶ ಹೊರಡಿಸುವ ಕುರಿತು ಚರ್ಚೆಗಳು ನಡೆಯುತ್ತಿದ್ದು, 2027ರ ಜನವರಿ 1ರಿಂದಲೇ ನಿಷೇಧ ಜಾರಿಗೆ ಬರುವ ಸಾಧ್ಯತೆಯಿದೆ.

ಈ ಕುರಿತು ಬೆಂಗಳೂರಿನಲ್ಲಿ ಸೋಮವಾರ ಸುದ್ದಿಗಾರ ರೊಂದಿಗೆ ಮಾತನಾಡಿದ ಸಾರಿಗೆ ಸಚಿವ ಭೈರತಿ ಸುರೇಶ್, ದ್ವಿಚಕ್ರ ವಾಹನ ಸವಾರರು ಸುರಕ್ಷಿತವಲ್ಲದ ಅರ್ಧ ಹೆಲ್ಮೆಟ್‌ಗಳನ್ನು ಬಳಸುವಂತಿಲ್ಲ ಎಂದು ತಿಳಿಸಿದ್ದಾರೆ. ಇಂತಹ ಅಸುರಕ್ಷಿತ ಹೆಲ್ಮೆಟ್‌ಗಳ ಉತ್ಪಾದನೆ ಮತ್ತು ತಯಾರಿಕೆಯನ್ನು ನಿಷೇಧಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಹೆಲ್ಮೆಟ್ ಬಳಕೆಯ ಮೂಲಕ ದ್ವಿಚಕ್ರ ವಾಹನ ಸವಾರರ ಸುರಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ ಈ ಕ್ರಮಕ್ಕೆ ಸರ್ಕಾರ ಮುಂದಾಗಿದೆ. ಪ್ರಸ್ತಾವಿತ ನಿಷೇಧ ಜಾರಿಗೆ ಬಂದರೆ ಅರ್ಧ ಹೆಲ್ಮೆಟ್‌ಗಳ ಬಳಕೆಯಷ್ಟೇ ಅಲ್ಲದೆ, ಅವುಗಳ ಉತ್ಪಾದನೆ ಮತ್ತು ಮಾರಾಟಕ್ಕೂ ನಿರ್ಬಂಧ ವಿಧಿಸುವ ಸಾಧ್ಯತೆಯಿದೆ. ಈ ಸಂಬಂಧ ಅಂತಿಮ ಆದೇಶ ಹಾಗೂ ಜಾರಿಯ ವಿಧಾನವನ್ನು ಸರ್ಕಾರ ಪ್ರಕಟಿಸಬೇಕಿದೆ.

ಕೋರಮಂಗಲ ವಾರ್ಡ್‌ಗೆ ರಾಷ್ಟ್ರೀಯ ಮನ್ನಣೆ

● ವಿಕ್ರಮ ವಾಹಿನಿ । ಬೆಂಗಳೂರು

ಸುಂದರ, ಸ್ವಚ್ಛ ಹಾಗೂ ಪರಿಸರಸ್ನೇಹಿ ಬೆಂಗಳೂರು ನಿರ್ಮಾಣಕ್ಕೆ ನಾಗರಿಕರ ಪಾಲ್ಗೊಳ್ಳುವಿಕೆ ಅತ್ಯಗತ್ಯ ಎಂದು ಪ್ರತಿಪಾದಿಸಿರುವ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ರಾಮಲಿಂಗಾರೆಡ್ಡಿ ಅವರ ನೇತೃತ್ವದಲ್ಲಿ ಬಿಟಿಎಂ ವಿಧಾನಸಭಾ ಕ್ಷೇತ್ರದ ಕೋರಮಂಗಲ ವಾರ್ಡ್ 151 ರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಭಾರತ ಸರ್ಕಾರದ ಸ್ವಚ್ಛ ವಾಯು ಸಮೀಕ್ಷೆ–2026ರಲ್ಲಿ 30 ಸಾವಿರಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ವಾರ್ಡ್‌ಗಳ ವಿಭಾಗದಲ್ಲಿ ಕೋರಮಂಗಲ ವಾರ್ಡ್ ರಾಷ್ಟ್ರೀಯ ಪ್ರಶಸ್ತಿ ವಿಜೇತ ವಾರ್ಡ್‌ಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದೆ.

ಸ್ವಚ್ಛ ವಾಯು ಸಮೀಕ್ಷೆ–2026ರ ರಾಜ್ಯಮಟ್ಟದ ಪ್ರಶಸ್ತಿಗಳಲ್ಲಿ ಕರ್ನಾಟಕ ಗಮನಾರ್ಹ ಸಾಧನೆ ಮಾಡಿದ್ದು, ವಾಯು ಗುಣಮಟ್ಟ ಸುಧಾರಣೆ ಹಾಗೂ ನಗರ ಪರಿಸರ ನಿರ್ವಹಣೆಗೆ ಕೈಗೊಂಡ ಪರಿಣಾಮಕಾರಿ ಕ್ರಮಗಳಿಗೆ ಮನ್ನಣೆ



ದೊರೆತಿದೆ. ಈ ಸಾಧನೆಯ ಭಾಗವಾಗಿ ಬೆಂಗಳೂರಿನ ಕೋರಮಂಗಲ ವಾರ್ಡ್ ರಾಷ್ಟ್ರೀಯ ಪ್ರಶಸ್ತಿಗೆ ಪಾತ್ರವಾಗಿದೆ.

ಸ್ವಚ್ಛ ಗಾಳಿ ಅಭಿಯಾನ, ಸುಸ್ಥಿರ ನಗರಾಭಿವೃದ್ಧಿ, ಘನತ್ಯಾಜ್ಯ ನಿರ್ವಹಣೆ ಹಾಗೂ ಪರಿಸರ ಸಂರಕ್ಷಣೆಯಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆಗೆ ವಾರ್ಡ್ ನೀಡಿರುವ ಆದ್ಯತೆಯನ್ನು ಈ ಮನ್ನಣೆ ಗುರುತಿಸಿದೆ. ಮಾಲಿನ್ಯ ನಿಯಂತ್ರಣ, ನಗರ ಸ್ವಚ್ಛತೆ ಮತ್ತು ಪರಿಸರದ ಗುಣಮಟ್ಟ ಸುಧಾರಿಸಲು ಕೈಗೊಂಡಿರುವ ವಿವಿಧ ಪ್ರಯತ್ನಗಳಿಗೆ ದೊರೆತಿರುವ ಮಾನ್ಯತೆ ಇದಾಗಿದೆ.

ಕೋರಮಂಗಲ ವಾರ್ಡ್‌ಗೆ ದೊರೆತಿರುವ ಈ ರಾಷ್ಟ್ರೀಯ ಮನ್ನಣೆಯು ಸ್ವಚ್ಛ ಹಾಗೂ ಪರಿಸರಸ್ನೇಹಿ ಬೆಂಗಳೂರಿನ ನಿರ್ಮಾಣದಲ್ಲಿ ಸ್ಥಳೀಯ ಆಡಳಿತ ಮತ್ತು ನಾಗರಿಕರ ಸಹಭಾಗಿತ್ವದ ಮಹತ್ವವನ್ನು ಮತ್ತೊಮ್ಮೆ ಎತ್ತಿಹಿಡಿದಿದೆ.

ಟೇಕಾಫ್ ವೇಳೆ ಇಂಡಿಗೋ ವಿಮಾನದಲ್ಲಿ ತಾಂತ್ರಿಕ ದೋಷ

● ವಿಕ್ರಮ ವಾಹಿನಿ । ಬೆಂಗಳೂರು

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಟೇಕಾಫ್‌ಗೆ ಸಿದ್ಧವಾಗಿದ್ದ ಇಂಡಿಗೋ ವಿಮಾನದಲ್ಲಿ ಕೊನೆಯ ಕ್ಷಣದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿದ್ದು, ಪೈಲಟ್‌ನ ಸಮಯಪ್ರಜ್ಞೆಯಿಂದ ಸಂಭವಿಸಬಹುದಾಗಿದ್ದ ದೊಡ್ಡ ಅನಾಹುತ ತಪ್ಪಿದೆ. ಬೆಂಗಳೂರಿನಿಂದ ತಮಿಳುನಾಡಿನ ಮಧುರೈಗೆ ತೆರಳಬೇಕಿದ್ದ ಇಂಡಿಗೋ ಸಂಸ್ಥೆಯ 6ಇ6526 ವಿಮಾನದಲ್ಲಿ ಈ ಘಟನೆ ನಡೆದಿದೆ. 92 ಪ್ರಯಾಣಿಕರನ್ನು ಹೊತ್ತಿದ್ದ ವಿಮಾನ ಟೇಕಾಫ್‌ಗಾಗಿ ರನ್‌ವೇನಲ್ಲಿ ಚಲಿಸುತ್ತಿದ್ದ ಸಂದರ್ಭದಲ್ಲಿ ಅದರ ಹೈಡ್ರಾಲಿಕ್ ವ್ಯವಸ್ಥೆಯಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿದೆ. ತಕ್ಷಣ ಎಚ್ಚೆತ್ತುಕೊಂಡ ಪೈಲಟ್ ತುರ್ತು ಬ್ರೇಕ್ ಹಾಕಿ ವಿಮಾನವನ್ನು ರನ್‌ವೇನಲ್ಲೇ ನಿಲ್ಲಿಸಿದ್ದಾರೆ.

ಬಳಿಕ ವಿಮಾನವನ್ನು ಸುರಕ್ಷಿತವಾಗಿ ರನ್‌ವೇಯಿಂದ ವಾಪಸ್ ಕರೆತರಲಾಗಿದೆ. ವಿಮಾನದಲ್ಲಿದ್ದ ಎಲ್ಲ 92 ಪ್ರಯಾಣಿಕರನ್ನು ಯಾವುದೇ ಅಪಾಯವಿಲ್ಲದೆ ಕೆಳಗಿಳಿಸಲಾಗಿದೆ. ವಿಮಾನಯಾನ ಸಂಸ್ಥೆಯ ಸಿಬ್ಬಂದಿ ಪ್ರಯಾಣಿಕರಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಿದ್ದು, ನಂತರ ಮತ್ತೊಂದು ವಿಮಾನದ ಮೂಲಕ ಅವರನ್ನು ಮಧುರೈಗೆ ಕಳುಹಿಸಿಕೊಡಲಾಗಿದೆ ಎಂದು ತಿಳಿದುಬಂದಿದೆ.

ತಾಂತ್ರಿಕ ದೋಷ ಕಾಣಿಸಿಕೊಂಡ ವಿಮಾನವನ್ನು ಸದ್ಯ ದುರಸ್ತಿಗಾಗಿ ಸ್ಥಳಾಂತರಿಸಿ ಪರಿಶೀಲನೆಗೆ ಒಳಪಡಿಸಲಾಗಿದೆ. ಟೇಕಾಫ್‌ಗೆ ಕೆಲವೇ ಕ್ಷಣಗಳಿರುವಾಗ ದೋಷ ಪತ್ತೆಯಾದ ಹಿನ್ನೆಲೆಯಲ್ಲಿ ಪೈಲಟ್ ತಕ್ಷಣ ಕೈಗೊಂಡ ಕ್ರಮದಿಂದ ಪ್ರಯಾಣಿಕರು ಸುರಕ್ಷಿತವಾಗಿ ಪಾರಾಗಿದ್ದಾರೆ.

ಪ್ರತಿ ದಿನ ಸರಾಸರಿ 31 ಮಂದಿ ಅಪಘಾತಗಳಿಗೆ ಬಲಿ!

● ವಿಕ್ರಮ ವಾಹಿನಿ । ಒಂದನೇ ಪುಟದಿಂದ

"ಅಪಘಾತಗಳನ್ನು ತಡೆಯುವ ಉದ್ದೇಶದಿಂದ ಅತಿವೇಗ, ಮದ್ಯಪಾನ ಮಾಡಿ ವಾಹನ ಚಾಲನೆ, ವಿರುದ್ಧ ದಿಕ್ಕಿನಲ್ಲಿ ವಾಹನ ಓಡಿಸುವುದು, ಹೆಲ್ಮೆಟ್ ಮತ್ತು ಸೀಟ್ ಬೆಲ್ಟ್ ಧರಿಸದಿರುವಂತಹ ಸಂಚಾರ ನಿಯಮ ಉಲ್ಲಂಘನೆಗಳ ವಿರುದ್ಧ ಕ್ರಮಗಳನ್ನು ತೀವ್ರಗೊಳಿಸಲಾಗುತ್ತಿದೆ" ಎಂದು ಎಂ.ಎ. ಸಲೀಂ ತಿಳಿಸಿದ್ದಾರೆ.

ರಸ್ತೆ ಅಪಘಾತಗಳಲ್ಲಿ ಪಾದಚಾರಿಗಳೂ ಹೆಚ್ಚಿನ ಸಂಖ್ಯೆಯಲ್ಲಿ ಬಲಿ: *2019ರಿಂದ 2025ರ ಅವಧಿಯಲ್ಲಿ ಕರ್ನಾಟಕದಲ್ಲಿ 2.13 ಲಕ್ಷಕ್ಕೂ ಹೆಚ್ಚು ರಸ್ತೆ ಅಪಘಾತಗಳು ಸಂಭವಿಸಿ, 60 ಸಾವಿರಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಅವರಲ್ಲಿ ಸುಮಾರು 16,800 ಮಂದಿ (28%) ಪಾದಚಾರಿಗಳಾಗಿದ್ದಾರೆ ಎಂದು ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರು 2026ರ ಫೆಬ್ರವರಿಯಲ್ಲಿ ತಿಳಿಸಿದ್ದರು.*

ಎಸ್‌ಐಆರ್: ಇಂಡಿ ಕೂಟದ ನಾಯಕರಿಂದ ಸುಪ್ರೀಂಗೆ ಮೊರೆ



● ವಿಕ್ರಮ ವಾಹಿನಿ । ನವದೆಹಲಿ

ದೇಶಾದ್ಯಂತ ಚುನಾವಣಾ ಆಯೋಗ ನಡೆಸುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಸಮಗ್ರ ನ್ಯಾಯಾಂಗ ಪರಿಶೀಲನೆಗೆ ಒಳಪಡಿಸುವಂತೆ ಕೋರಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೇರಿದಂತೆ ಇಂಡಿಯಾ ಮೈತ್ರಿಕೂಟದ ಹಲವು ನಾಯಕರು ಸೋಮವಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಗೆ ಅನುಮೋದನೆ ನೀಡಿದ ವಿಧಾನ, ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಟ್ಟಿರುವ ಆರೋಪ ಹಾಗೂ ಆಯೋಗದ ಆನ್‌ಲೈನ್ ನೋಂದಣಿ ವ್ಯವಸ್ಥೆಯಲ್ಲಿನ ಬದಲಾವಣೆಗಳ ಕುರಿತು ಸ್ಪಷ್ಟನೆ ನೀಡುವಂತೆ ಅರ್ಜಿಯಲ್ಲಿ ಮನವಿ ಮಾಡಲಾಗಿದೆ.

ಚುನಾವಣಾ ಆಯೋಗವು ಎಸ್‌ಐಆರ್ ಪ್ರಕ್ರಿಯೆಯನ್ನು ಸಾಮೂಹಿಕವಾಗಿ ಅನುಮೋದಿಸಿದೆಯೇ ಅಥವಾ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದ್ದಾರೆಯೇ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಅರ್ಜಿದಾರರು ಪ್ರಶ್ನಿಸಿದ್ದಾರೆ. ಈ ಸಂಬಂಧ ಆಯೋಗದ ಉನ್ನತ ಅಧಿಕಾರಿಗಳಿಗೆ 48 ನಿರ್ದಿಷ್ಟ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡುವಂತೆಯೂ ನ್ಯಾಯಾಲಯವನ್ನು ಕೋರಿದ್ದಾರೆ.

ಈ ಅರ್ಜಿಯು ಈಗಾಗಲೇ ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಕ್ಕೆ ಸಂಬಂಧಿಸಿದ ಮಧ್ಯಂತರ ಅರ್ಜಿಯಾಗಿದೆ. ಕಾಂಗ್ರೆಸ್ ನೇತೃತ್ವದಲ್ಲಿ ನ್ಯಾಯಾಲಯದವರೆಗೆ ರ‍್ಯಾಲಿ ನಡೆಸಿದ ಬಳಿಕ ಈ ಅರ್ಜಿ ಸಲ್ಲಿಸಲಾಗಿದೆ. ಚುನಾವಣಾ ಆಯೋಗದ ಪರವಾಗಿ ಪ್ರತಿ ಅಫಿಡವಿಟ್ ಸಲ್ಲಿಸಿದ್ದ ಉಪ ಚುನಾವಣಾ ಆಯುಕ್ತರಿಂದ ಪ್ರಮಾಣೀಕೃತ ಉತ್ತರಗಳನ್ನು ಪಡೆಯಲು ಅರ್ಜಿದಾರರು ಮನವಿ ಮಾಡಿದ್ದಾರೆ.

ಕಳೆದ ತಿಂಗಳು ಸಲ್ಲಿಸಿದ ಪ್ರತಿ ಅಫಿಡವಿಟ್ ಹಾಗೂ ನವೆಂಬರ್‌ನಲ್ಲಿ ಸಲ್ಲಿಸಿದ ಪೂರಕ ಅಫಿಡವಿಟ್‌ನಲ್ಲಿ, ಚುನಾವಣಾ ಆಯೋಗದ ಮೂವರು ಸದಸ್ಯರ ಮಂಡಳಿಯ ಸರ್ವಾನುಮತದ ನಿರ್ಧಾರದ ಬಳಿಕವೇ ಎಸ್‌ಐಆರ್ ಆದೇಶಗಳನ್ನು ಹೊರಡಿಸಲಾಗಿದೆ ಎಂದು ಆಯೋಗ ತಿಳಿಸಿತ್ತು.

ಆದರೆ, ಈ ನಿರ್ಧಾರಕ್ಕೆ ಸಂಬಂಧಿಸಿದ ಕಡತಗಳ ದಾಖಲೆ, ಸಭೆಯ ನಡಾವಳಿ ಅಥವಾ ನಿರ್ಧಾರ ಕೈಗೊಂಡ ದಿನಾಂಕಗಳನ್ನು ಆಯೋಗ ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದು ಅರ್ಜಿದಾರರು

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ನವಂಬರ್, 17- 2026
ಮಂಗಳವಾರ
ರಾಜಧಾನಿ
www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ನೆಫ್ರೋ ಯೂರಾಲಜಿ ಸಂಸ್ಥೆಯಲ್ಲಿ ತೊಫಲಕ್ ದರ್ಬಾರ್?

ಕಳಂಕಿತರ ವಿರುದ್ಧ ಕ್ರಮ ಕೈಗೊಳ್ಳದೇ ನಿವೃತ್ತಿ ನಂತರವೂ ಸೇವೆ ಮುಂದುವರಿಕೆ: ನಿಯಮ ಗಾಳಿಗೆ ತೂರಿತೇ ಸಂಸ್ಥೆ?

● ವಿಕ್ರಮ ವಾಹಿನಿ । ಬೆಂಗಳೂರು

ತಪ್ಪಿತಸ್ಥರೆಂದು ಸಾಬೀತಾದ ನೌಕರರ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸು ಮಾಡುವುದು ಶಿಸ್ತು ಪ್ರಾಧಿಕಾರದ ಜವಾಬ್ದಾರಿ. ಎಲ್ಲಾ ಸರ್ಕಾರಿ ಇಲಾಖೆಗಳಿಗೂ ಈ ನಿಯಮ ಅನ್ವಯಿಸುತ್ತದೆ. ಆದರೆ ವೈದ್ಯಕೀಯ ಶಿಕ್ಷಣ ಇಲಾಖೆ ಮಾತ್ರ ಇದಕ್ಕೆ ಹೊರತಾಗಿದ್ದು, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಹೈಕೋರ್ಟ್ ಮತ್ತು ಕರ್ನಾಟಕ ಲೋಕಾಯುಕ್ತ ಮಾಡಿರುವ ಶಿಫಾರಸುಗಳನ್ನು ನೆಫ್ರೋ ಯೂರಾಲಜಿ ಸಂಸ್ಥೇ ಗಾಳಿಗೆ ತೂರಿದೆ.

ಲೋಕಾಯುಕ್ತದ ತನಿಖಾ ವರದಿಯ ಆಧಾರದ ಮೇಲೆ ವೈದ್ಯಕೀಯ ಶಿಕ್ಷಣ ಇಲಾಖೆಯು ಬೆಂಗಳೂರಿನ ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿಯ ಅಂದಿನ ಪ್ರಭಾರ ನಿರ್ದೇಶಕ ಡಾ. ಕೇಶವಮೂರ್ತಿ, ವೈದ್ಯಕೀಯ ಅಧೀಕ್ಷಕ ಡಾ. ಪ್ರದೀಪ್, ಸಹಾಯಕ ಪ್ರಾಧ್ಯಾಪಕರಾದ ಡಾ.ಶ್ರೀಧರ್, ಡಾ.ಎ, ಕಿಶನ್, ಡಾ. ಶಿವಕುಮಾರ್ ಮತ್ತು ಡಾ.ಶ್ರೀನಿವಾಸ್ ಜೆ. ಅವರಿಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಿತ್ತು. 2025ರ ಜುಲೈ 9ರಂದು ಈ ನೋಟಿಸ್‌ಗಳನ್ನು ನೀಡಲಾಗಿದ್ದು, 15 ದಿನಗಳೊಳಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಮುಂದೆ ಖುದ್ದಾಗಿ ಹಾಜರಾಗಿ ತಮ್ಮ ವಿವರಣೆ ಸಲ್ಲಿಸುವಂತೆ ಸೂಚಿಸಲಾಗಿತ್ತು. ಆದರೆ 16 ತಿಂಗಳು ಕಳೆದರೂ ಈ ನೋಟಿಸ್‌ಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

ಪ್ರಭಾರ ನಿರ್ದೇಶಕರು, ವೈದ್ಯಕೀಯ ಅಧೀಕ್ಷಕರು ಹಾಗೂ ಹಲವು ಬೋಧಕ ಸಿಬ್ಬಂದಿಯ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಆಗುತ್ತಿರುವ ಅತಿಯಾದ ವಿಳಂಬಕ್ಕೆ ತೀವ್ರ ಆಘಾತ ಮತ್ತು ಅಸಮಾಧಾನ ವ್ಯಕ್ತಪಡಿಸಿರುವ ವೈದ್ಯರೊಬ್ಬರು, ವೈದ್ಯಕೀಯ ಶಿಕ್ಷಣ ಇಲಾಖೆಯ ಕಾರ್ಯವೈಖರಿಯನ್ನು ಟೀಕಿಸಿದ್ದಾರೆ. ಅಂದಿನ ಪ್ರಭಾರ ನಿರ್ದೇಶಕರು ನೀಡಿದ ದೂರಿನ ಆಧಾರದ ಮೇಲೆ ಯಾವುದೇ ಇಲಾಖಾ ವಿಚಾರಣೆಯನ್ನೂ ನಡೆಸದೇ ಈ ಹಿಂದೆ ಹಿರಿಯ ಪ್ರಾಧ್ಯಾಪಕರೊಬ್ಬರನ್ನು ಅಮಾನತುಗೊಳಿಸಲಾಗಿತ್ತು ಎಂಬುದನ್ನು ಅವರು ನೆನಪಿಸಿದ್ದಾರೆ.

"ವೈದ್ಯರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಾಗ ಈ ದ್ವಂದ್ವ ನೀತಿ ಏಕೆ? ಹಿರಿಯ ಪ್ರಾಧ್ಯಾಪಕರನ್ನು ಇಷ್ಟು ತ್ವರಿತವಾಗಿ ಅಮಾನತುಗೊಳಿಸಿದ ಇಲಾಖೆ, ಈಗ ಇತರರ ವಿರುದ್ಧ ಕ್ರಮ ಕೈಗೊಳ್ಳಲು ಏಕೆ ವಿಳಂಬ ಮಾಡುತ್ತಿದೆ? ಇಷ್ಟೊಂದು ವರ್ಷಗಳಿಂದ ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಸಚಿವರು ನಾನಾ ನೆಪಗಳನ್ನು ಮುಂದಿಟ್ಟುಕೊಂಡು ಪ್ರಭಾರ ನಿರ್ದೇಶಕರು, ವೈದ್ಯಕೀಯ ಅಧೀಕ್ಷಕರು ಹಾಗೂ ಇತರರ ವಿರುದ್ಧ ಕ್ರಮ ಕೈಗೊಳ್ಳುವುದನ್ನು ತಪ್ಪಿಸುತ್ತಿದ್ದಾರೆ. ಇವರ ವಿರುದ್ಧ ಕ್ರಮ ಕೈಗೊಳ್ಳಲು ವಿಳಂಬ ಮಾಡುತ್ತಿರುವುದರ ಹಿಂದಿನ ಕಾರಣ ಅಥವಾ ಉದ್ದೇಶ ಏನೆಂಬುದು ಸಾಮಾನ್ಯ ವ್ಯಕ್ತಿಗೂ ಅರ್ಥವಾಗುತ್ತದೆ. ಇಲ್ಲಿ ತೊಫಲಕ್ ಆಡಳಿತ ನಡೆಯುತ್ತಿದೆ" ಎಂದು ವೈದ್ಯರು ಟೀಕಿಸಿದ್ದಾರೆ.

ಈ ಪ್ರಕರಣ ಆರಂಭವಾಗಿದ್ದು, 2021ರ ಜುಲೈ 5ರಂದು. ಅಂದು ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿಯ ಪ್ರಾಧ್ಯಾಪಕ ಹಾಗೂ ವಿಭಾಗದ ಮುಖ್ಯಸ್ಥರಾಗಿದ್ದ ಡಾ. ಸುಜಾತ ಸಿದ್ದಪ್ಪ ಅವರು, ಕರ್ತವ್ಯದ ಅವಧಿಯಲ್ಲಿ ಖಾಸಗಿ ಪ್ರಾಕ್ಟೀಸ್ ಮಾಡುತ್ತಿದ್ದಾರೆ ಎಂದು ಆರೋಪಿಸಿ ಡಾ. ಕೇಶವಮೂರ್ತಿ ಆರ್. ಹಾಗೂ ಇತರ ಬೋಧಕ ಸಿಬ್ಬಂದಿಯ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದರು.

ತನಿಖೆ ನಡೆಸಿದ ಲೋಕಾಯುಕ್ತ ತಂಡ, ಡಾ. ಕೇಶವಮೂರ್ತಿ ಆರ್. ಮತ್ತು ಇತರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಶಿಫಾರಸ್ಸು ಮಾಡಿತ್ತು. "ತಪ್ಪಿತಸ್ಥರ ವಿರುದ್ಧ ಶಿಸ್ತು ವಿಚಾರಣಾ ಪ್ರಕ್ರಿಯೆ ಆರಂಭಿಸುವಂತೆ ಸಕ್ಷಮ ಪ್ರಾಧಿಕಾರಕ್ಕೆ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಸೆಕ್ಷನ್ 12(3)ರ ಅಡಿಯಲ್ಲಿ ಶಿಫಾರಸು ಮಾಡಲಾಗಿದೆ" ಎಂದು ಲೋಕಾಯುಕ್ತ ವರದಿಯಲ್ಲಿ ಉಲ್ಲೇಖಿಸಲಾಗಿತ್ತು.

ಅಲ್ಲದೆ, ಈ ವರದಿ ಸ್ವೀಕರಿಸಿದ ಮೂರು ತಿಂಗಳೊಳಗೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಅಥವಾ ಕೈಗೊಳ್ಳಲು ಉದ್ದೇಶಿಸಿರುವ ಕ್ರಮದ ಕುರಿತು ಲೋಕಾಯುಕ್ತಕ್ಕೆ ಮಾಹಿತಿ ನೀಡುವುದು ಸಕ್ಷಮ ಪ್ರಾಧಿಕಾರದ ಕರ್ತವ್ಯ. ಈ ವರದಿ ಯನ್ನು 2025ರ ಮಾರ್ಚ್ 3ರಂದು ನೀಡಲಾಗಿತ್ತು. ಲೋಕಾಯುಕ್ತ ನಿರ್ದೇಶಕರ ಪ್ರಕಾರ, ವೈದ್ಯಕೀಯ ಶಿಕ್ಷಣ ಇಲಾಖೆಯು 2025ರ ಜುಲೈ 9ರಂದು ಡಾ. ಕೇಶವಮೂರ್ತಿ ಆರ್. ಮತ್ತು ಇತರರಿಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಿ, 15 ದಿನಗಳೊಳಗೆ ಉತ್ತರ ಸಲ್ಲಿಸುವಂತೆ ಸೂಚಿಸಿತ್ತು.

ನಂತರ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಸೋಸಲೆ ಇಂದೂಧರ ಅವರ ನೇತೃತ್ವದಲ್ಲಿ 2025ರ ನವೆಂಬರ್ 19ರಂದು ಇಲಾಖಾ ವಿಚಾರಣೆ ನಡೆಸಲಾಯಿತು. ಆದರೆ, ಇಂದಿನವರೆಗೂ ಡಾ. ಕೇಶವಮೂರ್ತಿ ಆರ್. ಮತ್ತು ಇತರರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ. ನಿವೃತ್ತಿಯ ನಂತರವೂ ಡಾ. ಕೇಶವಮೂರ್ತಿ ಆರ್. ಅವರು ಗುತ್ತಿಗೆ ಆಧಾರದ ಮೇಲೆ ಅದೇ ಹುದ್ದೆಯಲ್ಲಿ ಮುಂದುವರಿದಿರುವುದು ಅಚ್ಚರಿ ಹಾಗೂ ಆಘಾತಕ್ಕೆ ಕಾರಣವಾಗಿದೆ.

ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿಯ ಪ್ರಾಧ್ಯಾಪಕ ಡಾ. ಶ್ರೀಧರ್ ಸಿ.ಜಿ. ಅವರ ವಿರುದ್ಧ ನಿರಂತರವಾಗಿ ವ್ಯಕ್ತವಾದ ಆಕ್ಷೇಪಣೆಗಳು ಹಾಗೂ ಪ್ರತಿಕೂಲ ತನಿಖಾ ವರದಿಗಳ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಅವರನ್ನು ಕರ್ನಾಟಕ ರಾಜ್ಯ ಅಂಗಾಂಗ ಕಸಿ ಸಲಹಾ ಸಮಿತಿಯಿಂದ ತೆಗೆದುಹಾಕಿರುವುದನ್ನು ಆ ವರದಿಯಲ್ಲಿ ವಿವರಿಸಲಾಗಿತ್ತು.

ಕಾರಣ ಕೇಳಿ ನೋಟಿಸ್ ಜಾರಿ

ಇದೇ ವೇಳೆ, ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಮೊಹಮ್ಮದ್ ಮೊಹ್ಸಿನ್ ಅವರು, ಡಾ. ಕೇಶವಮೂರ್ತಿ ಮತ್ತು ಇತರರಿಗೆ ಈಗಾಗಲೇ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. "ನಮಗೆ ಇಲಾಖಾ ವಿಚಾರಣೆಯ ವರದಿ ಲಭ್ಯವಾಗಿದೆ. ಆರೋಪಿತ ನೌಕರರಿಗೆ ಎರಡನೇ ಬಾರಿಗೆ ಕಾರಣ ಕೇಳಿ ನೋಟಿಸ್ ನೀಡಲಾಗುವುದು. ಅವರ ಉತ್ತರವನ್ನು ಪರಿಶೀಲಿಸಿದ ನಂತರ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ಎರಡನೇ ನೋಟಿಸ್ ನೀಡುವ ಪ್ರಕ್ರಿಯೆ ಶೀಘ್ರದಲ್ಲೇ ಆರಂಭವಾಗಲಿದೆ" ಎಂದು ಡಾ. ಮೊಹಮ್ಮದ್ ಮೊಹ್ಸಿನ್ ಸ್ಪಷ್ಟಪಡಿಸಿದ್ದಾರೆ.



ಅಮಾನತ್ತು ಆದೇಶ ಹಿಂಪಡೆಯಬೇಕು, ನ್ಯಾಯಯುತ ಬೇಡಿಕೆ ಈಡೇರಿಸಬೇಕು: ನ.30ರ ಗಡುವು ಡಿ.1ರಿಂದ ಬಂದ್



● ವಿಕ್ರಮ ವಾಹಿನಿ । ಬೆಂಗಳೂರು

ಸರ್. ಪುಟ್ಟಣ್ಣಚಟ್ಟಿ ಪುರಭವನದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ–ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ 29 ಬೇಡಿಕೆಗಳ ಈಡೇರಿಕೆಗಾಗಿ ಸಾಮೂಹಿಕ ರಜೆ ಹಾಕಿ, ಬೃಹತ್ ಪ್ರತಿಭಟನಾ ಸಭೆಯನ್ನು ಆಯೋಜಿಸಿದ್ದರು.

ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು, ಪದಾಧಿಕಾರಿಗಳು ಮತ್ತು ಕಂದಾಯ, ಆರೋಗ್ಯ, ತೋಟಗಾರಿಕೆ, ಇಂಜನಿಯರಿಂಗ್ ವಿಭಾಗದ ಅಧಿಕಾರಿಗಳು, ನೌಕರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಮುಖ್ಯ ಆಯುಕ್ತರಾದ ಎಂ.ಮಹೇಶ್ವರರಾವ್ ರವರು ಮಾತನಾಡಿ ಜನಗಣತಿ, ಎಸ್.ಐ.ಆರ್. ಇಂತಹ ಸಂದರ್ಭದಲ್ಲಿ ಅಧಿಕಾರಿ, ನೌಕರರು 15 ಗಂಟೆಗಳಿಗೂ ಹೆಚ್ಚು ಸಮಯ ಪ್ರತಿದಿನ ಕೆಲಸ ಮಾಡಿದ್ದಾರೆ ಇದರಿಂದ ಒಳ್ಳೆಯ ಹೆಸರು ಬಂದಿದೆ.

ಪಾಲಿಕೆಯಲ್ಲಿ ಅಧಿಕಾರಿ, ಸಿಬ್ಬಂದಿಗಳ ಕೊರತೆ ಇದೆ ಅದರು ಸಮಸ್ಯೆಗಳಿಗೆ ನೌಕರರು ಸ್ಪಂದಿಸಿ ಸಮಸ್ಯೆ ನಿವಾರಣೆ ಮಾಡುತ್ತಿದ್ದಾರೆ. ಬೇಡಿಕೆಗಳು ನನ್ನ ಗಮನಕ್ಕೆ ಬಂದಿದೆ, ನಿಮ್ಮ ಸಮಸ್ಯೆಗಳಿಗೆ ನೇರ ನನ್ನನು ಭೇಟಿ ಮಾಡಿ. ಪರಿಶೀಲನೆ ಮಾಡದೇ ಅಮಾನತ್ತು ಮಾಡಬಾರದು. ಪಾಲಿಯ ನೌಕರರು ಶಿಸ್ತಿನಿಂದ ಕೆಲಸ ಮಾಡಿ ಎಂದು ಹೇಳಿದರು.

ಎ.ಅಮೃತ್ ರಾಜ್ ರವರು ಮಾತನಾಡಿ ಕಂದಾಯ ವಿಭಾಗದಲ್ಲಿ ದಿನಕ್ಕೊಂದು ಕಾನೂನು ರೂಪಿಸಿ ಅಧಿಕಾರಿ,ನೌಕರರನ್ನ ಮಾನಸಿಕವಾಗಿ ಹಿಂಸೆ ನೀಡಿ, ಅಮಾನತ್ತು ಮಾಡುತ್ತಿದ್ದಾರೆ. ಒತ್ತಡ ಕೆಲಸದಿಂದ 15ಕ್ಕೂ ನೌಕರರು ಮೃತಪಟ್ಟಿದ್ದಾರೆ.

ಮುಂಬಾಯಿ ಮಹಾನಗರ ಪಾಲಿಕೆಯಲ್ಲಿ 1ಲಕ್ಷದ 50ಸಾವಿರ ಅಧಿಕಾರಿ, ಸಿಬ್ಬಂದಿಗಳು ಇದ್ದಾರೆ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ 3000 ಅಧಿಕಾರಿ, ನೌಕರರು, 10ಸಾವಿರ ಪೌರ ಕಾರ್ಮಿಕರು ಇದ್ದಾರೆ ಇಂತಹ ಕೆಟ್ಟ ಪರಿಸ್ಥಿತಿಯಲ್ಲಿ ಪಾಲಿಕೆ ಅಧಿಕಾರಿ, ನೌಕರರು ಜನಗಣತಿ, ಲೋಕಸಭಾ, ವಿಧಾನಸಭಾ ಚುನಾವಣೆಯಲ್ಲಿ ಅಚ್ಚುಕಟ್ಟಾಗಿ ಕೆಲಸ ಮಾಡಿದ್ದಾರೆ.ಐದು ಪಾಲಿಕೆಗಳಲ್ಲಿ ಖಾಲಿ ಇರುವ ಸುಮಾರು 3,800 ಹುದ್ದೆಗಳನ್ನು ಭರ್ತಿ ಮಾಡಿ ಒತ್ತಡ ಕಡಿಮೆ ಮಾಡಿ.

ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೆ ತರಲು ಒತ್ತಾಯ ಬಡ್ತಿ, ವರ್ಗಾವಣೆ, ವೇತನ ಮತ್ತು ಸೇವಾ ಸೌಲಭ್ಯಗಳ ಸಮಸ್ಯೆ ಪರಿಹರಿಸಬೇಕು .ಅಮಾನತ್ತು ಆದ ಅಧಿಕಾರಿ, ನೌಕರರನ್ನ ಅಮಾನತ್ತು ಆದೇಶ ಹಿಂಪಡೆಯಬೇಕು. ನಮ್ಮ ಬೇಡಿಕೆಗಳಿಗೆ ಸಚಿವ ಸ್ವಂದಿಸಿದ್ದು ತಮ್ಮ ಎಲ್ಲ ಬೇಡಿಕೆಗಳು ಸಮರ್ಪಕವಾಗಿ ಚರ್ಚೆ ಮಾಡಿ ಬಗೆಹರಿಸೋಣ ಎಂದು ಭರವಸೆ ನೀಡಿದರು. ನಮ್ಮ ಬೇಡಿಕೆಗಳು ನವೆಂಬರ್ 30ರ ಒಳಗೆ ಈಡೇರಿಸದೇ ಹೋದರೆ ಪಂಚಪಾಲಿಕೆ ಡಿಸೆಂಬರ್ 1ರಿಂದ ಮುಷ್ಕರ ,ಬಂದ್ ಮಾಡಿ ಪ್ರತಿಭಟನೆ ಮಾಡಲಾಗುವುದು ಎಂದು ಹೇಳಿದರು.

ಸಮಾನ ಕೆಲಸಕ್ಕೆ ಸಮಾನ ವೇತನ, ನೌಕರರು ಮತ್ತು ಕುಟುಂಬಕ್ಕೆ ನಗದುರಹಿತ ಆರೋಗ್ಯ ಚಿಕಿತ್ಸೆ ನೀಡುವಂತೆ ಬೇಡಿಕೆಯನ್ನೂ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಮುಖ್ಯ ಆಯುಕ್ತರಾದ ಎಂ.ಮಹೇಶ್ವರರಾವ್ ರವರಿಗೆ ಮನವಿ ಪತ್ರ ಸಲ್ಲಿಸಿದರು.

'ಜನಪ್ರಿಯತೆಗಾಗಿ ಸತ್ಯನಿಷ್ಠೆ, ಜವಾಬ್ದಾರಿಯನ್ನು ಬಲಿಕೊಡಬಾರದು'

● ವಿಕ್ರಮ ವಾಹಿನಿ । ಬೆಂಗಳೂರು

ಪತ್ರಿಕೋದ್ಯಮದಲ್ಲಿ ಜನಪ್ರಿಯತೆ ಎಷ್ಟು ಮುಖ್ಯವೋ, ಜವಾಬ್ದಾರಿಯೂ ಅಷ್ಟೇ ಮುಖ್ಯ. ಜನಪ್ರಿಯತೆ ಗಳಿಸುವ ಭರದಲ್ಲಿ ಸತ್ಯವನ್ನು ಕಡೆಗಣಿಸಬಾರದು. ಪತ್ರಕರ್ತರ ಬರವಣಿಗೆಯಲ್ಲಿ ಸತ್ಯನಿಷ್ಠೆ, ಸ್ವಂತಿಕೆ ಹಾಗೂ ಆಳವಾದ ವಿಶ್ಲೇಷಣೆ ಇರಬೇಕು. ಸಮಾಜದ ಸಮಸ್ಯೆಗಳಿಗೆ ಧ್ವನಿಯಾಗುವುದರ ಜತೆಗೆ ದೇಶದ ಅಭಿವೃದ್ಧಿ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ಜವಾಬ್ದಾರಿಯನ್ನು ಮಾಧ್ಯಮಗಳು ನಿರ್ವಹಿಸಬೇಕು ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಹೇಳಿದರು.

ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಅಂಗವಾಗಿ ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ವಾರ್ತಾ ಭವನದ ಸುಲೋಚನಾ ಸಭಾಂಗಣದಲ್ಲಿ ಆಯೋಜಿಸಿದ್ದ 'ಪತ್ರಿಕೋದ್ಯಮ: ಜನಪ್ರಿಯತೆಯೇ ಅಥವಾ ಜವಾಬ್ದಾರಿ ಯುತವೇ?' ವಿಷಯದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಿಕಾ ಸ್ವಾತಂತ್ರ್ಯ, ಮಾಧ್ಯಮಗಳ ಜವಾಬ್ದಾರಿ ಹಾಗೂ ಪ್ರಜಾಪ್ರಭುತ್ವದಲ್ಲಿ ಪತ್ರಿಕೋದ್ಯಮದ ಮಹತ್ವವನ್ನು ವಿವರಿಸಿದ ಅವರು, ಪಂಡಿತ್ ಜವಾಹರಲಾಲ್ ನೆಹರು ಅವರ ಪತ್ರಿಕಾ ಸ್ವಾತಂತ್ರ್ಯದ ಕುರಿತ ನಿಲುವುಗಳನ್ನು ಸ್ಮರಿಸಿದರು. ಪತ್ರಿಕಾ ಸ್ವಾತಂತ್ರ್ಯದ ದುರುಪಯೋಗದಿಂದ ಅಪಾಯಗಳಿದ್ದರೂ, ನಿರ್ಬಂಧಿತ ಪತ್ರಿಕಾ ವ್ಯವಸ್ಥೆಗಿಂತ ಸಂಪೂರ್ಣ ಸ್ವತಂತ್ರ ಪತ್ರಿಕಾ ವ್ಯವಸ್ಥೆಯನ್ನೇ ತಾವು ಹೆಚ್ಚು ಒಪ್ಪುವುದಾಗಿ ನೆಹರು ಹೇಳಿದ್ದ ಮಾತುಗಳನ್ನು ಉಲ್ಲೇಖಿಸಿದರು. ಪತ್ರಿಕಾ ಸ್ವಾತಂತ್ರ್ಯ ಕೇವಲ ಘೋಷಣೆಯಲ್ಲ, ಅದು ಪ್ರಜಾಪ್ರಭುತ್ವದ ಅವಿಭಾಜ್ಯ ಅಂಗ ಎಂಬುದನ್ನು ನೆಹರು ಅರಿತಿದ್ದರು ಎಂದು ಹೇಳಿದರು.

ಸ್ವತಂತ್ರ ಮತ್ತು ನಿರ್ಭೀತ ಪತ್ರಿಕೋದ್ಯಮವನ್ನು ಉಳಿಸಿ ಬೆಳೆಸುವ ಉದ್ದೇಶದಿಂದ 1966ರ ನವೆಂಬರ್ 16ರಂದು ಭಾರತೀಯ ಪತ್ರಿಕಾ ಮಂಡಳಿ ಕಾರ್ಯಾರಂಭ ಮಾಡಿತು. ಈ ಐತಿಹಾಸಿಕ ದಿನವನ್ನು ರಾಷ್ಟ್ರೀಯ ಪತ್ರಿಕಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಸ್ವಾತಂತ್ರ್ಯಪೂರ್ವ ಹಾಗೂ ಸ್ವಾತಂತ್ರ್ಯಾನಂತರದ ಪತ್ರಿಕೋದ್ಯಮದ ಪಯಣವನ್ನು ಅವಲೋಕಿಸುವ ಅಗತ್ಯವಿದೆ. ಪತ್ರಿಕಾ ಸ್ವಾತಂತ್ರ್ಯಕ್ಕೆ ದೇಶದಲ್ಲಿ ಮಹತ್ವ ನೀಡಲಾಗಿದ್ದರೂ, ಆ ಸ್ವಾತಂತ್ರ್ಯವನ್ನು ರಾಷ್ಟ್ರ ನಿರ್ಮಾಣಕ್ಕೆ ಎಷ್ಟರಮಟ್ಟಿಗೆ ಬಳಸಿಕೊಳ್ಳಲಾಗಿದೆ ಎಂಬುದನ್ನು ಪರಿಶೀಲಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಸಮಾಜದಲ್ಲಿ ಸಮಾನತೆ ಸ್ಥಾಪಿಸುವುದು, ನಾಗರಿಕರ ಹಕ್ಕುಗಳ ಬಗ್ಗೆ ಅರಿವು ಮೂಡಿಸುವುದು, ಅಭಿವೃದ್ಧಿಯ ವಿಚಾರಗಳನ್ನು ಮುನ್ನೆಲೆಗೆ ತರುವುದು ಹಾಗೂ ಸಂವಿಧಾನದ ಆಶಯಗಳ ಕುರಿತು ಸಾರ್ವಜನಿಕ ಚರ್ಚೆಗಳನ್ನು ಬೆಳೆಸುವಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದಾಗಿದೆ. ಕಾನೂನು ಮತ್ತು ನಿಯಮಗಳ ರೂಪಿಸುವಿಕೆಗೆ ಅಗತ್ಯವಾದ ಚರ್ಚೆಗಳಿಗೆ ವೇದಿಕೆ ಕಲ್ಪಿಸುವ ಜವಾಬ್ದಾರಿಯೂ ಪತ್ರಿಕೋದ್ಯಮದ ಮೇಲಿದೆ. ಪತ್ರಿಕಾ ಸ್ವಾತಂತ್ರ್ಯ ದೊರೆತಿದೆ ಎಂಬುದಷ್ಟೇ ಮುಖ್ಯವಲ್ಲ; ಆ ಸ್ವಾತಂತ್ರ್ಯದ ಮೂಲಕ ದೇಶದ ಬೆಳವಣಿಗೆಗೆ ಮಾಧ್ಯಮಗಳು ನೀಡಿರುವ ಕೊಡುಗೆಯನ್ನೂ ಮೌಲ್ಯಮಾಪನ ಮಾಡಬೇಕು ಎಂದರು.



ಪತ್ರಕರ್ತರ ಬರಹ ಸಮಾಜದ ಮೇಲೆ ಎಂತಹ ಪರಿಣಾಮ ಬೀರಬಲ್ಲದು ಎಂಬುದಕ್ಕೆ ತಮ್ಮ ವಿದ್ಯಾರ್ಥಿ ಜೀವನದ ಘಟನೆಯೊಂದನ್ನು ಡಾ. ಪರಮೇಶ್ವರ ಉದಾಹರಿಸಿದರು. 1970ರ ದಶಕದಲ್ಲಿ ತಾವು ವಿದ್ಯಾರ್ಥಿಯಾಗಿದ್ದಾಗ ಪ್ರಕಟವಾದ ಲೇಖನವೊಂದರ ಹಿನ್ನೆಲೆಯಲ್ಲಿ ಪತ್ರಿಕೆಯ ಕಚೇರಿಗೆ ಬೆಂಕಿ ಹಚ್ಚಲಾಗಿದ್ದ ಘಟನೆಯನ್ನು ಸ್ಮರಿಸಿದರು. ಒಂದು ಲೇಖನ ಸಮಾಜದಲ್ಲಿ ಎಂತಹ ಪ್ರತಿಕ್ರಿಯೆ ಉಂಟುಮಾಡಬಹುದು ಎಂಬುದಕ್ಕೆ ಇದು ಉದಾಹರಣೆ. ಓದುಗರು ಬರಹವನ್ನು ಸಕಾರಾತ್ಮಕವಾಗಿ ಸ್ವೀಕರಿಸಬಹುದು ಅಥವಾ ತಪ್ಪಾಗಿ ಅರ್ಥೈಸಿಕೊಂಡು ವಿನಾಶಕಾರಿ ಪ್ರತಿಕ್ರಿಯೆ ವ್ಯಕ್ತಪಡಿಸಬಹುದು. ಹೀಗಾಗಿ ಲೇಖನ ಬರೆಯುವಾಗ ಅದರ ಉದ್ದೇಶ, ಚಿಂತನೆ ಮತ್ತು ಸಮಾಜದ ಮೇಲಿನ ಪರಿಣಾಮಗಳ ಬಗ್ಗೆ ಪತ್ರಕರ್ತರು ಗಂಭೀರವಾಗಿ ಯೋಚಿಸಬೇಕು ಎಂದು ಕಿವಿಮಾತು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಸ್ವಂತ ಚಿಂತನೆಯೊಂದಿಗೆ ಲೇಖನ ಗಳನ್ನು ಬರೆಯುವ ಪ್ರವೃತ್ತಿ ಕಡಿಮೆಯಾಗುತ್ತಿರುವುದು ಆತಂಕಕಾರಿ. ತಂತ್ರಜ್ಞಾನದ ಬೆಳವಣಿಗೆಯಿಂದ ಕೀಬೋರ್ಡ್ ಮತ್ತು ಮೊಬೈಲ್ ಮೂಲಕವೇ ಪತ್ರಿಕಾ ಕೆ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

ಬೊಸ್ಕೊ ಸಂಸ್ಥೆಯಲ್ಲಿ ಸಂಭ್ರಮದ ಮಕ್ಕಳ ದಿನಾಚರಣೆ

● ವಿಕ್ರಮ ವಾಹಿನಿ । ಬೆಂಗಳೂರು

ಮಕ್ಕಳ ಹಕ್ಕುಗಳ ರಕ್ಷಣೆ, ಅವರ ಆತ್ಮಗೌರವ ಹೆಚ್ಚಿಸುವುದು ಹಾಗೂ ಭವಿಷ್ಯದ ಕನಸುಗಳನ್ನು ನನಸಾಗಿಸಲು ಪ್ರೇರಣೆ ನೀಡುವ ಉದ್ದೇಶದಿಂದ ಬೆಂಗಳೂರಿನ ಬೊಸ್ಕೊ ಸಂಸ್ಥೆಯ ವತಿಯಿಂದ ನವೆಂಬರ್ 15ರಂದು ಮಕ್ಕಳ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.



ಬೆಂಗಳೂರಿನ ಸೇಂಟ್ ತೆರೇಸಾ ಬಾಲಕಿಯರ ಪ್ರೌಢಶಾಲೆಯಲ್ಲಿ ಬೆಳಿಗ್ಗೆ 10ರಿಂದ ಸಂಜೆ 4.30ರವರೆಗೆ ನಡೆದ ಕಾರ್ಯಕ್ರಮವು ಯುನಿಸೆಫ್‌ನ ಸ್ಫೂರ್ತಿದಾಯಕ ಘೋಷವಾಕ್ಯವಾದ 'ನನ್ನ ದಿನ, ನನ್ನ ಹಕ್ಕುಗಳು, ನನ್ನ ಭವಿಷ್ಯ' ಎಂಬ ಆಶಯದೊಂದಿಗೆ ಆಯೋಜಿಸಲಾಗಿತ್ತು. ಬೊಸ್ಕೊ ಸಂಸ್ಥೆಯ ವಿವಿಧ ಕೇಂದ್ರಗಳು ಹಾಗೂ ಕಾರ್ಯಕ್ಷೇತ್ರಗಳಿಂದ ಆಗಮಿಸಿದ್ದ ಸುಮಾರು 1,000 ಮಕ್ಕಳು ಉತ್ಸವದಲ್ಲಿ ಪಾಲ್ಗೊಂಡಿದ್ದರು.

ಕನ್ನಡ ಚಲನಚಿತ್ರ ನಟ ಹಾಗೂ ಬಿಗ್ ಬಾಸ್ ಸ್ಪರ್ಧಿ ಧ್ರುವಂತ್, ಬೊಸ್ಕೊ ಬೆಂಗಳೂರಿನ ಸಂಸ್ಥಾಪಕ ಸದಸ್ಯ ಹಾಗೂ ಮಾಜಿ ಕಾರ್ಯನಿರ್ವಾಹಕ ನಿರ್ದೇಶಕ ಫಾ. ಜಾರ್ಜ್ ಕೊಲ್ಲೆಶಾನಿ, ಮಾಜಿ ಕಾರ್ಯನಿರ್ವಾಹಕ ನಿರ್ದೇಶಕರಾದ ಫಾ. ಎಡ್ವರ್ಡ್ ಥಾಮಸ್ ಮತ್ತು ಫಾ. ಜಾರ್ಜ್ ಪಿ.ಎಸ್. ಹಾಗೂ ಹಾಲಿ ಕಾರ್ಯನಿರ್ವಾಹಕ ನಿರ್ದೇಶಕ ಫಾ. ವರ್ಗೀಸ್ ಪಲ್ಲಿಪುರಂ ಸೇರಿದಂತೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮಕ್ಕಳ ಆತ್ಮವಿಶ್ವಾಸ ಮತ್ತು ಆತ್ಮಗೌರವ ಹೆಚ್ಚಿಸುವುದರ ಜೊತೆಗೆ ಅವರ ಆಕಾಂಕ್ಷೆಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ವಿವಿಧ ಮನರಂಜನಾ ಹಾಗೂ ಸ್ಫೂರ್ತಿದಾಯಕ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು. 'ಕನಸು ಕಾಣಿ–ನಂಬಿ–ಸಾಧಿಸಿ' ಎಂಬ ಸಂದೇಶದೊಂದಿಗೆ ವಿವಿಧ ಆಟಗಳು, ವಿಷಯಾಧಾರಿತ ಸಾಂಸ್ಕೃತಿಕ ಕಾರ್ಯಕ್ರಮಗಳು ಮಕ್ಕಳಲ್ಲಿ ಉತ್ಸಾಹ ಮೂಡಿಸಿದವು.

ಈ ಸಂದರ್ಭದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಉತ್ತೇಜನಕ್ಕಾಗಿ ಬೊಸ್ಕೊ ಸಂಸ್ಥೆಯ ವಿವಿಧ ಕೇಂದ್ರಗಳು ಹಾಗೂ ಕಾರ್ಯಕ್ಷೇತ್ರಗಳಲ್ಲಿ ಮಹತ್ವದ ಕೊಡುಗೆ ನೀಡಿದ ಗಣ್ಯರನ್ನು 'ಮಕ್ಕಳ ಮಿತ್ರ ಪ್ರಶಸ್ತಿ' ನೀಡಿ ಗೌರವಿಸಲಾಯಿತು. ಸಾಂಸ್ಕೃತಿಕ, ಸಾಮಾಜಿಕ, ಕ್ರೀಡೆ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಮಕ್ಕಳಿಗೆ 'ಪ್ರತಿಭಾ ಪುರಸ್ಕಾರ' ನೀಡಿ ಪ್ರೋತ್ಸಾಹಿಸಲಾಯಿತು. ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಬೊಸ್ಕೊ ಸಂಸ್ಥೆಯ ಸಾಧನೆ ಮತ್ತು ಸೇವೆಯನ್ನು ಗುರುತಿಸುವ ಪ್ರಶಸ್ತಿಗಳನ್ನೂ ಪ್ರದಾನ ಮಾಡಲಾಯಿತು.

46 ವರ್ಷಗಳ ಮಕ್ಕಳ ಸೇವೆ:

ಬೊಸ್ಕೊ (ಬೆಂಗಳೂರು ಓಣಿಯವರ ಸೇವಾ ಕೂಟ) ಸಂಸ್ಥೆಯು 1980ರ ಜೂನ್ 15ರಂದು ಸ್ಥಾಪನೆಯಾದ ಸ್ವಯಂಸೇವಾ ಸಂಸ್ಥೆಯಾಗಿದೆ. ಬೀದಿ ಮಕ್ಕಳು, ಅನಾಥರು, ಮನೆಬಿಟ್ಟು ಬಂದವರು, ಬಡ ಹಾಗೂ ಶೋಷಿತ ಮಕ್ಕಳು, ಕಾಣೆಯಾದ ಮಕ್ಕಳು ಮತ್ತು ಬಾಲ ಕಾರ್ಮಿಕರ ರಕ್ಷಣೆ ಹಾಗೂ ಪುನರ್ವಸತಿಗಾಗಿ ಸಂಸ್ಥೆ ನಿರಂತರವಾಗಿ ಶ್ರಮಿಸುತ್ತಿದೆ.

ಕಳೆದ 46 ವರ್ಷಗಳಲ್ಲಿ ಸುಮಾರು 1.25 ಲಕ್ಷ ಮಕ್ಕಳನ್ನು ರಕ್ಷಿಸಿ, ಅವರಿಗೆ ಆಶ್ರಯ, ಶಿಕ್ಷಣ, ಸಮಾಲೋಚನೆ ಹಾಗೂ ವೃತ್ತಿಪರ ತರಬೇತಿ ಒದಗಿಸುವ ಮೂಲಕ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಸಂಸ್ಥೆ ಮಹತ್ವದ ಸಾಧನೆ ಮಾಡಿದೆ. ಈ ಸೇವೆಯನ್ನು ಗುರುತಿಸಿ ಭಾರತ ಸರ್ಕಾರವು 2015ರಲ್ಲಿ ಬೊಸ್ಕೊ ಸಂಸ್ಥೆಗೆ ರಾಷ್ಟ್ರೀಯ ಮಕ್ಕಳ ಕಲ್ಯಾಣ ಪ್ರಶಸ್ತಿ ನೀಡಿ ಗೌರವಿಸಿದೆ.

ಬೊಸ್ಕೊ 24ಥ7 ಯೋಜನೆಯಡಿ ಬೆಂಗಳೂರಿನ ಪ್ರಮುಖ ರೈಲು ನಿಲ್ದಾಣಗಳು, ಬಸ್ ನಿಲ್ದಾಣಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸಂಕಷ್ಟದಲ್ಲಿರುವ ಮಕ್ಕಳ ರಕ್ಷಣೆ ಮತ್ತು ಪುನರ್ವಸತಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರ ಸಹಕಾರದೊಂದಿಗೆ ಶಾಲಾ–ಕಾಲೇಜುಗಳು, ಕೊಳಚೆ ಪ್ರದೇಶಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮಕ್ಕಳ ಹಕ್ಕುಗಳು ಮತ್ತು ರಕ್ಷಣಾ ವ್ಯವಸ್ಥೆಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಮಕ್ಕಳ ಹಕ್ಕುಗಳ ಸಮಿತಿಗಳನ್ನು ರಚಿಸಿ, ಮಕ್ಕಳಿಗೆ ತರಬೇತಿ ನೀಡುವ ಮೂಲಕ ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಲು ಹಾಗೂ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಲು ಪ್ರೋತ್ಸಾಹಿಸಲಾಗುತ್ತಿದೆ.

ಒಟ್ಟಾರೆ, ಮಕ್ಕಳ ಹಕ್ಕುಗಳ ಜಾಗೃತಿ, ಪ್ರತಿಭಾ ಪ್ರದರ್ಶನ ಹಾಗೂ ಸಾಧಕರಿಗೆ ಗೌರವ ಸಲ್ಲಿಸುವ ಮೂಲಕ ಬೊಸ್ಕೊ ಸಂಸ್ಥೆಯ ಮಕ್ಕಳ ದಿನಾಚರಣೆ ಮಕ್ಕಳ ಪಾಲಿಗೆ ವರ್ಣರಂಜಿತ ಮತ್ತು ಸ್ಮರಣೀಯ ಉತ್ಸವವಾಗಿ ಮೂಡಿಬಂತು.

ಹಿಂದೂ ವಿರೋಧಿ ಕಾಂಗ್ರೆಸ್: ರವಿಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಕಾಂಗ್ರೆಸ್ ಸರ್ಕಾರದ ಜನವಿರೋಧಿ, ರೈತವಿರೋಧಿ ಹಾಗೂ ಹಿಂದೂ ವಿರೋಧಿ ನೀತಿಗಳನ್ನು ಖಂಡಿಸಿ ನವೆಂಬರ್ 23ರಿಂದ ರಾಜ್ಯದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಮೂರು ದಿನಗಳ ಕಾಲ ಬಿಜೆಪಿ ವತಿಯಿಂದ ರಾಜ್ಯವ್ಯಾಪಿ ಹೋರಾಟ ಹಮ್ಮಿ ಕೊಳ್ಳಲಾಗುವುದು ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ತಿಳಿಸಿದರು.



ಸೋಮವಾರ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರಿಗೆ ರೂ. 5,000 ಪರಿಹಾರ ನೀಡುವುದಾಗಿ ಘೋಷಿಸಿ ಕೇವಲ ರೂ. 500 ಅಲ್ಪ ಮೊತ್ತದ ಪರಿಹಾರ ನೀಡುತ್ತಿರುವುದು ರಾಜ್ಯ ಸರ್ಕಾರದ ನಾಚಿಕೆಗೇಡಿನ ನಡೆ ಎಂದು ಆಕ್ರೋಶ ವ್ಯಕ್ತಪಡಿಸಿದರು. "ಇದು ಅಮಾನವೀಯ ಮತ್ತು ರೈತರ ಸಂಕಷ್ಟದ ಬಗ್ಗೆ ಸರ್ಕಾರಕ್ಕಿರುವ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ. ರಾಜ್ಯ ಸರ್ಕಾರ ರೈತರ ಬದುಕಿನೊಂದಿಗೆ ಚೆಲ್ಲಾಟ ವಾಡುತ್ತಿದೆ" ಎಂದು ಕಿಡಿಕಾರಿದರು.

ಜನವಿರೋಧಿ ನೀತಿಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಪ್ರಶ್ನಿಸುತ್ತಿರುವ ಹಿಂದೂ ಕಾರ್ಯಕರ್ತರು ಹಾಗೂ ಬಿಜೆಪಿ ಮುಖಂಡರನ್ನು ಗುರಿಯಾಗಿಸಿಕೊಂಡು ಕಿರುಕುಳ ನೀಡುತ್ತಿರುವ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ರವಿಕುಮಾರ್, "ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಭಿನ್ನಾಭಿಪ್ರಾಯ ವ್ಯಕ್ತಪಡಿಸುವುದು ಅತ್ಯಂತ ಪ್ರಮುಖವಾದ ಹಕ್ಕು. ಆದರೆ ಕಾಂಗ್ರೆಸ್ ಸರ್ಕಾರದ ವರ್ತನೆ ಸರ್ವಾಧಿಕಾರಿ ಧೋರಣೆ ಹಾಗೂ ದಮನಕಾರಿ ಮನಸ್ಥಿತಿಯನ್ನು ತೋರಿಸುತ್ತದೆ. ಕಾಂಗ್ರೆಸ್ ಸರ್ಕಾರದ ಹಿಂದೂ ವಿರೋಧಿ ನಿಲುವನ್ನು ಬಿಜೆಪಿ ವಿಧಾನಮಂಡಲದ ಉಭಯ ಸದನಗಳಲ್ಲೂ ಬಲವಾಗಿ ವಿರೋಧಿಸಲಿದೆ" ಎಂದರು. ಭಾರತ ಸಂವಿಧಾನದ 19ನೇ ವಿಧಿಯು ಅಭಿವ್ಯಕ್ತಿ ಸ್ವಾತಂತ್ರ್ಯದ ಹಕ್ಕನ್ನು ಪ್ರತಿಪಾದಿಸುತ್ತದೆ. ಆದರೆ ಕರ್ನಾಟಕದಲ್ಲಿ ತಮ್ಮ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಚಲಾಯಿಸುತ್ತಿರುವ ಹಿಂದೂ ಕಾರ್ಯಕರ್ತರ ವಿರುದ್ಧ ಕಾಂಗ್ರೆಸ್ ಸರ್ಕಾರ ದಮನಕಾರಿ ಕ್ರಮಗಳನ್ನು ಕೈಗೊಳ್ಳುತ್ತಿದೆ. ಇದು ಸಂವಿಧಾನದ 19ನೇ ವಿಧಿಯ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಅವರು ಆರೋಪಿಸಿದರು.

"ಬಾಗಲಕೋಟೆ, ವಿಜಯಪುರ ಹಾಗೂ ಹುಬ್ಬಳ್ಳಿ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಹಿಂದೂ ಕಾರ್ಯಕರ್ತರನ್ನು ಕರೆಸಿ, ರಾಜ್ಯ ಸರ್ಕಾರದ ವಿರುದ್ಧ ಯಾವುದೇ ಪೋಸ್ಟ್‌ಗಳನ್ನು ಹಾಕುವುದಿಲ್ಲ ಎಂದು ರೂ. 1 ಲಕ್ಷ ಮೊತ್ತದ ಬಾಂಡ್ ಬರೆದುಕೊಡುವಂತೆ ಪೊಲೀಸರು ಒತ್ತಾಯಿಸುತ್ತಿದ್ದಾರೆ. ಇದು ಅತ್ಯಂತ ಖಂಡನೀಯ ಮತ್ತು ಅತಿರೇಕದ ವರ್ತನೆ" ಎಂದು ರವಿಕುಮಾರ್ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯವ್ಯಾಪಿ ಹೋರಾಟದ ಸಿದ್ಧತೆಗಾಗಿ ನವೆಂಬರ್ 18ರಿಂದ ಮೂರು ದಿನಗಳ ಕಾಲ ಪೂರ್ವಭಾವಿ ಸಂಘಟನಾ ಚಟುವಟಿಕೆಗಳನ್ನು ಹಮ್ಮಿ ಕೊಳ್ಳಲಾಗುವುದು ಎಂದು ಅವರು ತಿಳಿಸಿದರು.



ಬೆಂಗಳೂರಿನ ಜಯನಗರದ ಕ್ಲೌಡ್ ನೈನ್ ಆಸ್ಪತ್ರೆಗೆ ಭೇಟಿ ನೀಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು.ಟಿ.ಖಾದರ್ ಅವರು, ಆಪರೇಷನ್ ಬಳಿಕ ಕೋಮಾ ಸ್ಥಿತಿಗೆ ಹೋಗಿರುವ ಪುಟ್ಟ ಮಗು ಶಯಾನ್‌ನ ಆರೋಗ್ಯ ಸ್ಥಿತಿಯನ್ನು ಪರಿಶೀಲಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದರು. ಮಗು ಕಣ್ಣು ತೆರೆದಿದ್ದು, ಮಗುವಿನ ಈಗಿನ ಸ್ಥಿತಿ ಹಾಗೂ ಮುಂದಿನ ಚಿಕಿತ್ಸೆಯ ಬಗ್ಗೆ ವೈದ್ಯರಿಂದ ಸಂಪೂರ್ಣ ಮಾಹಿತಿ ಪಡೆಯಲಾಗಿದೆ. ಮಗುವಿನ ಪೋಷಕರು, ಆಸ್ಪತ್ರೆಯ ಮುಖ್ಯಸ್ಥರು ಹಾಗೂ ವೈದ್ಯರೊಂದಿಗೆ ಜಂಟಿ ಸಭೆ ನಡೆಸಿ ಕೆಲವು ಸ್ಪಷ್ಟ ಸೂಚನೆಗಳನ್ನು ನೀಡಿದ್ದಾರೆ.

ಬಡ ಮಕ್ಕಳಿಗೆ ಉಚಿತ ಶಿಕ್ಷಣ, ಆರೋಗ್ಯ ಸೇವೆ ದೊರೆತಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ: ಸ್ವಾಮಿ ರಾಕುಂಜೀ ಮಹಾರಾಜ್

● ವಿಕ್ರಮ ವಾಹಿನಿ । ಬೆಂಗಳೂರು

ದೇವನಹಳ್ಳಿ ಸಮೀಪದ ಬೆಟ್ಟೇನಹಳ್ಳಿ, ತರಹುಣಸೆ ರಸ್ತೆ, ಮಾರಗೊಂಡನ ಹಳ್ಳಿಯಲ್ಲಿರುವ ಆಚಾರ್ಯ ಶ್ರೀ ರಾಕುಂ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ 'ರಾಕುಂ ಮಕ್ಕಳ ಉತ್ಸವ–2026' ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು.



ಕಾರ್ಯಕ್ರಮಕ್ಕೆ ಸ್ವಾಮಿ ರಾಕುಂಜೀ ಮಹಾರಾಜ್, ಶಾಲೆಯ ಪ್ರಾಂಶುಪಾಲರು ಹಾಗೂ ಶಿಕ್ಷಕ ವೃಂದದವರು ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ವಾಮಿ ರಾಕುಂಜೀ ಮಹಾರಾಜ್ ಅವರು, ಗ್ರಾಮೀಣ ಪ್ರದೇಶಗಳ ಬಡ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಹಾಗೂ ಆರೋಗ್ಯ ಸೇವೆಗಳು ಉಚಿತವಾಗಿ ದೊರೆಯಬೇಕು. ಇದರಿಂದ ಮಾತ್ರ ದೇಶದ ಸಮಗ್ರ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂಬ ಆಶಯದೊಂದಿಗೆ ಆಚಾರ್ಯ ಶ್ರೀ ರಾಕುಂ ಶಾಲೆಯನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು.

ಮಕ್ಕಳು ದೇವರ ಸಮಾನರು. ಅವರಿಗೆ ಉತ್ತಮ ಶಿಕ್ಷಣ ಮತ್ತು ಸೂಕ್ತ ಮಾರ್ಗದರ್ಶನ ದೊರೆತರೆ ಭವಿಷ್ಯದಲ್ಲಿ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಂಡು ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಬಲ್ಲರು. ನಮ್ಮ ಶಾಲೆಯಲ್ಲಿ ಅಂಧ ಹಾಗೂ ಸಾಮಾನ್ಯ ಮಕ್ಕಳಿಗೆ ನರ್ಸರಿಯಿಂದ ಸ್ನಾತಕೋತ್ತರ ಪದವಿವರೆಗೆ ಉಚಿತ ಶಿಕ್ಷಣದ ಜೊತೆಗೆ ಊಟ ಮತ್ತು ವಸತಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಮಕ್ಕಳ ಉತ್ಸವದ ಅಂಗವಾಗಿ ವಿದ್ಯಾರ್ಥಿಗಳಿಂದ ಭರತನಾಟ್ಯ, ಚಲನಚಿತ್ರ ಗೀತೆಗಳಿಗೆ ನೃತ್ಯ, ಸಂಗೀತ, ಯೋಗ ಹಾಗೂ ಕರಾಟೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಮತ್ತು ಕಲಾತ್ಮಕ ಪ್ರದರ್ಶನಗಳು ನಡೆದವು. ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿ ನೆರೆದಿದ್ದವರ ಮೆಚ್ಚುಗೆಗೆ ಪಾತ್ರರಾದರು.

ಇದೇ ಸಂದರ್ಭದಲ್ಲಿ ಸಮಾಜ ಸೇವೆಯಲ್ಲಿ ಗಣನೀಯ ಕೊಡುಗೆ ನೀಡಿದ ಹೆಚ್. ಪ್ರಕಾಶ್, ಬೈಲಾಂಜನಪ್ಪ, ರವಿ.ಎಂ, ಅಜಯ್ ಭಾರ್ಗವ, ದಿನೇಶ್ ಹಾಗೂ ಜಿ.ಎನ್. ಸುನೀಲ್ ಅವರಿಗೆ 'ವಿಶಿಷ್ಟ ಸಾಮಾಜಿಕ ಸೇವಾ ಪ್ರಶಸ್ತಿ' ಪ್ರದಾನ ಮಾಡಿ ಗೌರವಿಸಲಾಯಿತು.

'ಮನೆಗೊಂದು ಕನ್ನಡ ಪತ್ರಿಕೆ' ಅಭಿಯಾನಕ್ಕೆ ಚಾಲನೆ

● ವಿಕ್ರಮ ವಾಹಿನಿ । ಬೆಂಗಳೂರು

ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಪ್ರತಿಯೊಂದು ಮನೆಯಲ್ಲೂ ಕನ್ನಡ ಪತ್ರಿಕೆಗಳ ಓದುವ ಅಭ್ಯಾಸ ಬೆಳೆಸುವುದು ಅತ್ಯಗತ್ಯ. ಈ ನಿಟ್ಟಿನಲ್ಲಿ ಬ್ಯಾಂಕರ್ಸ್ ಕನ್ನಡಿಗರ ಬಳಗದ ವತಿಯಿಂದ ನವೆಂಬರ್ ತಿಂಗಳಿನಲ್ಲಿ 'ಮನೆಗೊಂದು ಕನ್ನಡ ಪತ್ರಿಕೆ' ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಬಳಗದ ಅಧ್ಯಕ್ಷ ಎಂ. ವೆಂಕಟೇಶ ಶೇಷಾದ್ರಿ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರತಿಯೊಂದು ಮನೆಯೂ ಕನಿಷ್ಠ ಒಂದು ಕನ್ನಡ ಪತ್ರಿಕೆಗೆ ಚಂದಾದಾರರಾಗುವ ಮೂಲಕ ಕನ್ನಡ ಓದುವ ಸಂಸ್ಕೃತಿಯನ್ನು ಬೆಳೆಸಬೇಕು. ಪತ್ರಿಕೆಗಳ ನಿರಂತರ ಓದಿನಿಂದ ಭಾಷಾ ಜ್ಞಾನ, ಸಾಮಾನ್ಯ ಜ್ಞಾನ ಹಾಗೂ ಸಾಮಾಜಿಕ ಅರಿವು ವೃದ್ಧಿಯಾಗುತ್ತದೆ. ವಿಶೇಷವಾಗಿ ಮಕ್ಕಳಲ್ಲಿ ಬಾಲ್ಯದಿಂದಲೇ ಪತ್ರಿಕೆ ಓದುವ ಹವ್ಯಾಸ ಬೆಳೆಸಲು ಮನೆಯಲ್ಲಿಯೇ ಕನ್ನಡ ಪತ್ರಿಕೆ ಲಭ್ಯವಿರುವುದು ಸಹಕಾರಿಯಾಗುತ್ತದೆ ಎಂದು ಹೇಳಿದ್ದಾರೆ. ಕನ್ನಡ ಪತ್ರಿಕೆಗಳಿಗೆ ಪ್ರೋತ್ಸಾಹ ನೀಡುವುದು ಕೇವಲ ಓದುವ ಅಭ್ಯಾಸ ಬೆಳೆಸುವುದಕ್ಕೆ ಸೀಮಿತವಾಗಿಲ್ಲ. ಅದು ಕನ್ನಡ ಪತ್ರಿಕೋದ್ಯಮದ ಬೆಳವಣಿಗೆಗೆ ಬೆಂಬಲ ನೀಡುವುದರ ಜೊತೆಗೆ ಕನ್ನಡ ಭಾಷೆಯ ಉಳಿವು, ಬೆಳವಣಿಗೆ ಮತ್ತು ಸಮೃದ್ಧಿಗೆ ಪ್ರತಿಯೊಬ್ಬರೂ ನೀಡುವ ಮಹತ್ವದ ಕೊಡುಗೆಯಾಗಿದೆ ಎಂದಿದ್ದಾರೆ.

ಆದ್ದರಿಂದ ಕನ್ನಡಿಗರು ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಮನೆಗಳಲ್ಲಿ ಕನ್ನಡ ಪತ್ರಿಕೆಗಳಿಗೆ ಆದ್ಯತೆ ನೀಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಅಧಿವೇಶನದಲ್ಲಿ ಕೈ ಸರ್ಕಾರಕ್ಕೆ ಬಿಸಿ ಮುಟ್ಟಿಸಲಿದ್ದೇವೆ: ಛಲವಾದಿ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರದ ದುಂಡಾವರ್ತಿ ವರ್ತನೆಯ ವಿರುದ್ಧ ಬೆಳಗಾವಿ ಅಧಿವೇಶನದಲ್ಲಿ ಸರ್ಕಾರಕ್ಕೆ ಬಿಸಿ ಮುಟ್ಟಿಸುವ ಕೆಲಸ ಮಾಡಲು ನಿರ್ಧಾರ ಮಾಡಿದ್ದೇವೆ ಎಂದು ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸರ್ಕಾರದ ದುಂಡಾವರ್ತಿಯನ್ನು ಖಂಡಿಸಿದ ಅವರು, ಬಿಜೆಪಿ ಕಾರ್ಯಕರ್ತರ ಮೇಲೆ ಗೂಂಡಾ ಕಾಯ್ದೆ ಹಾಕುತ್ತಿದ್ದಾರೆ. ಐದು ಲಕ್ಷ ರೂಪಾಯಿ ಬಾಂಡ್ ಕೊಡಿ ಇಲ್ಲವಾದರೆ ನಿಮ್ಮನ್ನ ರೌಡಿ ಲಿಸ್ಟ್‌ನಲ್ಲಿ ಸೇರಿಸುತ್ತೇವೆ ಎನ್ನುತ್ತಿದ್ದಾರೆ.

ಈ ಸಂಬಂಧ ಇವತ್ತು ಪೊಲೀಸ್ ಮಹಾ ನಿರ್ದೇಶಕರನ್ನು (ಡಿಜಿ) ಇಂದು ಸಂಜೆ ಆರು ಗಂಟೆಗೆ ನಾವು ಭೇಟಿಯಾಗಲಿದ್ದೇವೆ ಎಂದು ವಿವರಿಸಿದರು.

ಸಚಿವ ಸಂಪುಟ ಸಭೆಗೆ 4 ಕೋಟಿ ಹೇಗೆ?: ರಾಜ್ಯದಲ್ಲಿ ಬರ ಪರಿಸ್ಥಿತಿ ಇದೆ. ಮಂಗಳೂರಿನಲ್ಲಿ ಒಂದು ದಿನದ ಕ್ಯಾಬಿನೆಟ್ ಮೀಟಿಂಗ್ ಮಾಡಿದ್ದಾರೆ. ನಾಲ್ಕು ಕೋಟಿ ಖರ್ಚಾಗಿದೆ. ಏನ್ ಮಾಡಿದ್ರಿ ಅಲ್ಲಿ? ಕಿಶ್ಮಿಶ್ ತಿನ್ನೋಕೆ ನಾಲ್ಕು ಕೋಟಿ ಖರ್ಚಾಗುತ್ತದೆಯೇ? ಅಥವಾ ಇಡ್ಲಿ ವಡೆಗೆ? ಮೀನು ತಿಂದಿರಬಹುದು, ಆದರೆ ನಾಲ್ಕು ಕೋಟಿ ಖರ್ಚಾಗುತ್ತದೆಯೇ? ನೂರು ದಿನಗಳ ಸಾಧನೆ ಸಮಾವೇಶ ಮಾಡಿದಾಗ ಹತ್ತು ಕೋಟಿ ಖರ್ಚಾಯ್ತಲ್ಲಾ? ಎಂದು ಕೇಳಿದರು.

ಅಂಗವಿಕಲರ ಪಿಂಚಣಿ ಕೊಡುತ್ತಿಲ್ಲ. ವೃದ್ಧಾಪ್ಯ ವೇತನವೂ ಇಲ್ಲ. ಇವರ ಬಗ್ಗೆ ಚಿಂತೆ ಬೇಡವೇ ಸರ್ಕಾರಕ್ಕೆ? ಆದರೆ ದುಂದುವೆಚ್ಚ ಮಾಡೋದ್